ಸಂಪುಟ : 10 ಸಂಚಿಕೆ: 100 ಪುಟ : 4+2 ಬೆಲೆ: 3.00 ಬುಧವಾರ ಮೇ 21 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 100 Pages : 4+2 Price : 3.00 Wednesday May 21 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯ ಸರ್ಕಾರಿ ಪಾಲಿಟೆಕ್ನಿಕ್ ಹೊಳೆಆಲೂರ ನಲ್ಲಿ ಎಪ್ರಿಲ್ 11 ರಿಂದ ಮೇ 9 ರವರೆಗೆ ಮೊದಲ ಹಂತ ಹಾಗೂ ಮೇ 13 ರಿಂದ 17 ರವರೆಗೆ ದ್ವಿತೀಯ ಹಂತ , ಮೇ 19 ರಿಂದ 22 ರವರೆಗೆ ತೃತೀಯ ಹಂತ ಹಾಗೂ ಮೇ 23 ರಿಂದ 27 ರವರೆಗೆ ನಾಲ್ಕನೇ ಹಂತವಾಗಿ 2025–26ನೇ ಸಾಲಿನ ಪ್ರಥಮ ವರ್ಷದ ಪ್ರವೇಶ ಪ್ರಕ್ರಿಯೆ ಪ್ರಾರಂಭವಾಗಿದ್ದು, ಎಸ್‌ಎಸ್‌ಎಲ್‌ಸಿ ಪಾಸಾದ ಅರ್ಹ ವಿದ್ಯಾರ್ಥಿಗಳು ಅಗತ್ಯ ಸೂಕ್ತ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಬಹುದಾಗಿದೆ.

ಸಂಸ್ಥೆಯಲ್ಲಿ ಆರ್ಟಿಫಿಷಿಯಲ್ ಇಂಟೆಲಿಜೆನ್ಸ್ , ಕಂಪ್ಯೂಟರ್ ಸೈನ್ಸ್ ಮತ್ತು ಇಂಜನೀಯರಿಂಗ್ , ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಷನ್ ಇಂಜನೀಯರಿಂಗ್ ಮತ್ತು ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ಸ್ ಇಂಜನೀಯರಿಂಗ್ ಕೋರ್ಸ್‌ಗಳಿದ್ದು ಆಫ್ ಲೈನ್ ಮೂಲಕ ಮೆರಿಟ್ ಹಾಗೂ ರೋಸ್ಟರ್ ಗಳಿಗೆ ಅನುಗುಣವಾಗಿ ಪ್ರಾಚಾರ್ಯರ ಹಂತದಲ್ಲಿಯೇ ಪ್ರವೇಶ ಪ್ರಕ್ರಿಯೆಯನ್ನು ನಡೆಸಲಾಗುವುದು. ಹೆಚ್ಚಿನ ವಿವರಗಳಿಗಾಗಿ ದೂರವಾಣಿ ಸಂಖ್ಯೆ 8317433922, 9448183626 ಸಂಪರ್ಕಿಸಬಹುದಾಗಿದೆ ಎಂದು ಹೊಳೆ ಆಲೂರ ಸರ್ಕಾರಿ ಪಾಲಿಟೆಕ್ನಿಕ್ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಆಕ್ಷೇಪಣೆ ಸಲ್ಲಿಕೆಗೆ ಮೇ.29 ಕೊನೆಯ ದಿನ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ 15ನೇ ಹಣಕಾಸು ಆಯೋಗದಡಿಯಲ್ಲಿ ಗುತ್ತಿಗೆ ಆಧಾರದ ಮೇಲೆ ಖಾಲಿ ಇರುವ ಬ್ಲಾಕ್ ಮಟ್ಟದ ಸಾರ್ವಜನಿಕ ಆರೋಗ್ಯ ಘಟಕದ ಪ್ರಯೋಗಶಾಲಾ ತಾಂತ್ರಿಕ ಅಧಿಕಾರಿಗಳ ಹುದ್ದೆಗೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಪಂಚಾಯತ್, ಗದಗ ಹಾಗೂ ಅಧ್ಯಕ್ಷರು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ ಗದಗ ಇವರ ಅನುಮೋದನೆ ಮೇರೆಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿತ್ತು.

ಸ್ವೀಕೃತವಾದ ಅರ್ಜಿಗಳಿಗೆ ರೋಷ್ಟರ್ ಕಂ ಮೆರಿಟ್ ಅಳವಡಿಸಿ ರೋಷ್ಟರ್ ಸಂ.1 ಮತ್ತು 2ರ ಅಭ್ಯರ್ಥಿಗಳ ಮೂಲ ದಾಖಲಾತಿಗಳನ್ನು ಪರಿಶೀಲಿಸಲಾಗಿದ್ದು, ಮೂಲ ದಾಖಲಾತಿಗಳ ಪರಿಶೀಲನೆಯಲ್ಲಿ ಅರ್ಹರಾದ ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ತಯಾರಿಸಿದೆ.

ತಾತ್ಕಾಲಿಕ ಆಯ್ಕೆ ಪಟ್ಟಿಗೆ ಯಾವುದಾದರೂ ಆಕ್ಷೇಪಣೆಗಳಿದ್ದಲ್ಲಿ ರಜಾ ದಿನಗಳನ್ನು ಹೊರತುಪಡಿಸಿ ಮೇ 29ರ ಸಂಜೆ 4 ಗಂಟೆಯೊಳಗೆ ಕಚೇರಿ ಸಮಯದಲ್ಲಿ ಜಿಲ್ಲಾ ಕಾರ್ಯಕ್ರಮ ನಿರ್ವಹಣಾ ಘಟಕ ಗದಗ ಇಲ್ಲಿ ಲಿಖಿತ ರೂಪದಲ್ಲಿ ನೀಡಲು ಸೂಚಿಸಿದೆ. ಪ್ರಯೋಗಶಾಲಾ ತಾಂತ್ರಿಕ ಅಧಿಕಾರಿಗಳ ಹುದ್ದೆಗೆ ತಾತ್ಕಾಲಿಕವಾಗಿ ಆಯ್ಕೆಯಾದ ಅಭ್ಯರ್ಥಿಗಳ ಪಟ್ಟಿಯನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿಯ ಸೂಚನಾ ಫಲಕದಲ್ಲಿ ಹಾಗೂ ರಚಿಜಚಿರ.ಟುಫಿ.ಟಿ ವೆಬ್‌ಸೈಟ್‌ನಲ್ಲಿ ಕೂಡ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಿದೆ ಎಂದು ಪ್ರಕಟಣೆ ತಿಳಿಸಿದೆ.

### ನುಡಿದಂತೆ ನಡೆದಿದ್ದೇವೆ, 142 ಭರವಸೆಗಳನ್ನು ಎರಡು ವರ್ಷದಲ್ಲಿ ಪೂರೈಸಿದ್ದೇವೆ: ಸಿ.ಎಂ ಸಿದ್ದರಾಮಯ್ಯ

# ರಾಜ್ಯದ ಜನತೆಯೇ ನಮ್ಮ ಮಾಲೀಕರು



■ವಿಜಯಸಾಕ್ಷಿ ಸುದ್ದಿ, ಹೊಸಪೇಟೆ

ಚುನಾವಣೆ ವೇಳೆ ನಾವು ಕೊಟ್ಟಿದ್ದ ಭರವಸೆಗಳಲ್ಲಿ ಐದು ಗ್ಯಾರಂಟಿಗಳ ಜೊತೆಗೆ 142 ಭರವಸೆಗಳನ್ನು ಎರಡು ವರ್ಷಗಳಲ್ಲಿ ಪೂರೈಸಿದ್ದೇವೆ. ಮುಂದಿನ ಮೂರು ವರ್ಷಗಳಲ್ಲಿ ಉಳಿದ ಭರವಸೆಗಳನ್ನು ಈಡೇರಿಸುತ್ತೇವೆ. ರಾಜ್ಯದ ಜನತೆಯೇ ನಮ್ಮ ಮಾಲೀಕರು. ನಮ್ಮ ಮಾಲೀಕರಿಗೆ ನಾವು ಕೊಟ್ಟ ಮಾತಿನಂತೆ ನಡೆದುಕೊಂಡಿದ್ದೇವೆ. ನಿಮ್ಮ ಆಶೀರ್ವಾದ ಇರುವವರೆಗೂ ಬಿಜೆಪಿಯ ಸುಳ್ಳಿನ ರಾಶಿಗೆ ನಾವು ಹೆದರುವ, ಅಂಜುವ ಪ್ರಶ್ನೆಯೇ ಇಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ನೀಡಿದರು.

ಸರ್ಕಾರ ಎರಡು ವರ್ಷ ಪೂರೈಸಿದ ಸಂದರ್ಭದಲ್ಲಿ ಕಂದಾಯ ಇಲಾಖೆ ಆಯೋಜಿಸಿದ್ದ 'ಸಮರ್ಪಣೆ ಸಂಕಲ್ಪ' ಸಮಾವೇಶದಲ್ಲಿ 111111 ಫಲಾನುಭವಿಗಳಿಗೆ ಹಕ್ಕುಪತ್ರ ವಿತರಣೆ ಮಾಡಿ, ಉಕ್ಕಿನ ಮಹಿಳೆ ಇಂದಿರಾ ಗಾಂಧಿಯವರ ಪ್ರತಿಮೆಯನ್ನು ಲೋಕಾರ್ಪಣೆಗೊಳಿಸಿ ಅವರು ಮಾತನಾಡುತ್ತಿದ್ದರು.

ಮೊದಲ ಬಾರಿ ಮುಖ್ಯಮಂತ್ರಿಯಾಗಿ ನಾವು ನೀಡಿದ್ದ 165 ಭರವಸೆಗಳಲ್ಲಿ 158 ಭರವಸೆಗಳನ್ನು ಈಡೇರಿಸಿದ್ದಲ್ಲದೆ, ಪ್ರಣಾಳಿಕೆಯಲ್ಲಿ ಘೋಷಿಸದ ಹೊಸದಾದ 30 ಕಾರ್ಯಕ್ರಮಗಳನ್ನು ರೂಪಿಸಿ ಜಾರಿಗೊಳಿಸಿದ್ದೇವೆ. ಹೀಗಿದ್ದರೂ ಬಿಜೆಪಿಯೇಕೆ ತಾನು ಕೊಟ್ಟಿದ್ದ ಭರವಸೆಗಳನ್ನು ಈಡೇರಿಸದೆ, ಜನರ ಎದುರು ಸುಳ್ಳು ಹೇಳಿಕೊಂಡು ತಿರುಗುತ್ತಿದೆ ಎಂದು ಪ್ರಶ್ನಿಸಿದರು.

ನಮ್ಮ ರಾಜ್ಯ ಸರ್ವ ಜನಾಂಗದ ಶಾಂತಿಯ ತೋಟ. ಸರ್ವರನ್ನೂ ಸಮಾನವಾಗಿ ಗೌರವಿಸುವ ರಾಜ್ಯ. ಸಂವಿಧಾನದ ಅಡಿಯಲ್ಲಿ ಸರ್ವ ಧರ್ಮಗಳನ್ನೂ ಸಮಾನವಾಗಿ ಕಾಣಬೇಕು. ನಾವು ಇದೇ ಮೌಲ್ಯವನ್ನು ಪಾಲಿಸುತ್ತಿದ್ದೇವೆ. ಕೇಂದ್ರ ಸರ್ಕಾರದಿಂದ ಪ್ರತೀ ವರ್ಷ ನಮಗೆ ನಷ್ಟ ಆಗುತ್ತಿದೆ. ನಾವು ಪ್ರತೀ ವರ್ಷ 4.5 ಲಕ್ಷ ಕೋಟಿ ತೆರಿಗೆ ರೂಪದಲ್ಲಿ ಕೊಟ್ಟರೆ ನಮಗೆ ವಾಪಾಸ್ ಬರುವುದು ಒಂದು ರೂಪಾಯಿಗೆ 14 ಪೈಸೆ ಮಾತ್ರ. ಇದರಿಂದ ಒಕ್ಕೂಟ ವ್ಯವಸ್ಥೆಯ ಘನತೆ ಹಾಳು ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

ಕೇಂದ್ರ ಪ್ರಾಯೋಜಿತ ಯೋಜನೆಗಳಿಗೂ ಕೇಂದ್ರದಿಂದ ಪೂರ್ತಿ ಅನುದಾನ ಬಂದಿಲ್ಲ. ಕೇಂದ್ರದ ಯೋಜನೆಗಳಿಗೆ ರಾಜ್ಯ ಸರ್ಕಾರ ರಾಜ್ಯದ ಪಾಲನ್ನು ಪೂರ್ತಿ ಕೊಟ್ಟಿದೆ. ಆದರೆ ಕೇಂದ್ರ ಸರ್ಕಾರ ತಮ್ಮ ಪಾಲನ್ನು ಕೊಡದೆ ಅನ್ಯಾಯ ಮಾಡುತ್ತಿದೆ. 15ನೇ ▸▸3ನೇ ಪುಟಕ್ಕೆ



> 2014ರಲ್ಲಿ 10 ಸಾವಿರ ಇದ್ದ ಚಿನ್ನದ ಬೆಲೆ ಈಗ ಲಕ್ಷ ಆಗಿದೆ. ಗ್ಯಾಸ್ ಬೆಲೆ 400 ಇರುವುದು ಈಗ 850 ರೂ ಆಗಿದೆ. ಡೀಸೆಲ್, ಪೆಟ್ರೋಲ್, ಎಣ್ಣೆ, ಕಾಳು, ಬೇಳೆ, ರಸಗೊಬ್ಬರ ಎಲ್ಲದರ ಬೆಲೆಯನ್ನೂ ಆಕಾಶಕ್ಕೆ ಏರಿಸಿರುವ ಕೇಂದ್ರದ ಮೋದಿಯವರ ಸರ್ಕಾರದ ವಿರುದ್ಧ ಜನಾಕ್ರೋಶ ಇದೆಯೇ ಹೊರತು ನಮ್ಮ ಸರ್ಕಾರದ ಪರವಾಗಿ ಜನಾಭಿಪ್ರಾಯ ಇದೆ. ಹೀಗಾಗಿ ಬಿಜೆಪಿ ಹಮ್ಮಿಕೊಂಡಿರುವ ಜನಾಕ್ರೋಶ ಕಾರ್ಯಕ್ರಮವೇ ನಕಲಿಯಾಗಿದೆ.
>
> – ಸಿದ್ದರಾಮಯ್ಯ. ಮುಖ್ಯಮಂತ್ರಿಗಳು.

### ವರವಿ ಕ್ಷೇತ್ರದಲ್ಲಿ ಹಮ್ಮಿಕೊಂಡಿದ್ದ ಅಭಿನಂದನಾ ಕಾರ್ಯಕ್ರಮದಲ್ಲಿ ಸಚಿವ ಎಚ್.ಕೆ. ಪಾಟೀಲ

# ವರವಿ ಕ್ಷೇತ್ರ ಪ್ರವಾಸಿ ತಾಣವಾಗಬೇಕು

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಶಿರಹಟ್ಟಿ ತಾಲೂಕಿನ ವರವಿ ಕ್ಷೇತ್ರವು ಧಾರ್ಮಿಕ ಪ್ರವಾಸಿ ತಾಣವಾಗಿ ಮಾರ್ಪಡಬೇಕು. ಆ ನಿಟ್ಟಿನಲ್ಲಿ ಇಲ್ಲಿ ಅರ್ಧಕ್ಕೆ ನಿಂತ ಕಾಮಗಾರಿಗಳಿಗೆ ಮೂರು ಕೋಟಿ ರೂಗಳ ಅನುದಾನವನ್ನು ಸರ್ಕಾರದಿಂದ ಒದಗಿಸಲಾಗುವುದು ಎಂದು ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಭರವಸೆ ನೀಡಿದರು.

ಅವರು ವರವಿ ಕ್ಷೇತ್ರದಲ್ಲಿ ಶ್ರೀ ಜಗದ್ಗುರು ಮೌನೇಶ್ವರ ದೇವಸ್ಥಾನ ಟ್ರಸ್ಟ್ ಕಮಿಟಿ ಹಾಗೂ ವಿಶ್ವಕರ್ಮ ಮಹಾ ಒಕ್ಕೂಟ ರಾಜ್ಯ ಘಟಕದ ವತಿಯಿಂದ ಹಮ್ಮಿಕೊಂಡಿದ್ದ ಅಭಿನಂದನಾ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡುತ್ತಿದ್ದರು.

ವಿಶ್ವಕರ್ಮರು ಕಲಾ ನೈಪುಣ್ಯತೆಯ ಹರಿಕಾರರು. ಕಲೆ–ಸಂಸ್ಕೃತಿಯ ಕ್ಷೇತ್ರಕ್ಕೆ ವಿಶ್ವಕರ್ಮರ ಕೊಡುಗೆ ಅಪಾರ. ಇಂಥ ಸಮುದಾಯದಲ್ಲಿ ಜನಿಸಿದ ಮೌನೇಶ್ವರರು ಈ ಕ್ಷೇತ್ರದಲ್ಲಿ ತಪಗೈದು ಈ ಗ್ರಾಮವನ್ನು ಪಾವನಗೊಳಿಸಿದ್ದಾರೆ. ಈ ಪುಣ್ಯ ಕ್ಷೇತ್ರ ಪ್ರವಾಸಿ ತಾಣವಾಗಿ ಅಭಿವೃದ್ಧಿ ಹೊಂದಬೇಕು. ಅದಕ್ಕೆ ಎಲ್ಲ ರೀತಿಯ ಸಹಕಾರವನ್ನು ಸರ್ಕಾರ ನೀಡಲಿದೆ ಎಂದರು.




ವಿಶ್ವಕರ್ಮ ಮಹಾ ಒಕ್ಕೂಟದ ಅಧ್ಯಕ್ಷರಾದ ವಿಜಯಕುಮಾರ ಪತ್ತಾರ ಮಾತನಾಡಿ, ಬಜೆಟ್‌ನಲ್ಲಿ ಪ್ರವಾಸಿ ತಾಣಗಳ ಅಭಿವೃದ್ಧಿಗೆ ಮೀಸಲಿಟ್ಟಿರುವ 42 ಕೋಟಿ ರೂಗಳ ಅನುದಾನದಲ್ಲಿ ವರವಿ ಕ್ಷೇತ್ರದ ಅಭಿವೃದ್ಧಿಗೆ ಅಧಿಕ ಮೊತ್ತವನ್ನು ಮಂಜೂರು ಮಾಡಬೇಕು. ಜೊತೆಗೆ ವಿಶ್ವಕರ್ಮ ಸಮುದಾಯದ ಶಕ್ತಿ ಕೇಂದ್ರಗಳಾದ ಶಿರಸಂಗಿ, ತಿಂಥಣಿ ಹಾಗೂ ಲಿಂಗನಬಂಡಿ ಕ್ಷೇತ್ರಗಳ ಅಭಿವೃದ್ಧಿಯತ್ತ ಸರ್ಕಾರ ಗಮನ ನೀಡಬೇಕು ಎಂದು ಸಚಿವರಲ್ಲಿ ಮನವಿ ಮಾಡಿದರು.

> ವರವಿ ಮೌನೇಶ್ವರ ಮಠದ ಕಮಿಟಿಯ ಅಧ್ಯಕ್ಷ ಮೋಹನ್ ನರಗುಂದ ಪ್ರಾಸ್ತಾವಿಕ ನುಡಿಗಳನ್ನಾಡಿ, ವರವಿ ಕ್ಷೇತ್ರಕ್ಕೆ ನಾಡಿನ ಮೂಲೆ ಮೂಲೆಯಿಂದ ಭಕ್ತರು ಆಗಮಿಸುತ್ತಾರೆ. ಕ್ಷೇತ್ರದ ಸಮಗ್ರ ಅಭಿವೃದ್ಧಿಯಾದಲ್ಲಿ ಪ್ರವಾಸಿಗರ ಸಂಖ್ಯೆ ಇನ್ನೂ ಹೆಚ್ಚುತ್ತದೆ. ಈ ಕ್ಷೇತ್ರದ ಅಭಿವೃದ್ಧಿಗೆ ಸರ್ಕಾರ ಪ್ರಮುಖ ಆದ್ಯತೆ ನೀಡಬೇಕು ಎಂದು ಸಚಿವರಲ್ಲಿ ಮನವಿ ಮಾಡಿದರು.

ಮಾಜಿ ಶಾಸಕ ರಾಮಣ್ಣ ಲಮಾಣಿ, ಗಣ್ಯರಾದ ಪಿ.ವಿ. ಕಪ್ಪತ್ತನವರ, ಹುಮಾಯೂನ ಮಾಗಡಿ, ಸುಜಾತಾ ದೊಡ್ಡಮನಿ, ಅಪ್ಪಣ್ಣ ಇನಾಮತಿ, ಗಿರೀಶ ಎಂ.ಡಬಾಲಿ, ನಿರಂಜನ ಬಡಿಗೇರ, ಚಂದ್ರಕಾಂತ ಸೋನಾರ, ದೇವೇಂದ್ರಪ್ಪ ಬಡಿಗೇರ, ಮುತ್ತಣ್ಣ ಬಡಿಗೇರ, ಪಿ.ವಿ. ಬಡಿಗೇರ ಉಪಸ್ಥಿತರಿದ್ದರು.

ಗದಗ ಜಿಲ್ಲಾ ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ರಾಜಗೋಪಾಲ ಡಿ. ಕಡ್ಲಿಕೊಪ್ಪ ಸ್ವಾಗತಿಸಿದರು. ವಿಶ್ವನಾಥ ಯ. ಕಮ್ಮಾರ ಕಾರ್ಯಕ್ರಮ ನಿರೂಪಿಸಿ, ವಂದಿಸಿದರು.

### ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಎಫ್.ಎ.ಕ್ಯೂ ಗುಣಮಟ್ಟದ ಸೂರ್ಯಕಾಂತಿ ಹುಟ್ಟುವಳಿ ಖರೀದಿ

# ಸೂರ್ಯಕಾಂತಿ ಖರೀದಿಗೆ ಬೆಂಬಲ ಬೆಲೆ ನಿಗದಿ

■ವಿಜಯಸಾಕ್ಷಿ ಸುದ್ದಿ,

2024–25ನೇ ಸಾಲಿನ ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಎಫ್.ಎ.ಕ್ಯೂ ಗುಣಮಟ್ಟದ ಹಿಂಗಾರು ಹಂಗಾಮಿನ ಸೂರ್ಯಕಾಂತಿ ಹುಟ್ಟುವಳಿ ಖರೀದಿಸಲು ಬೆಂಬಲ ಬೆಲೆ ನಿಗದಿಪಡಿಸಲಾಗಿದೆ. ನೋಂದಣಿ ಪ್ರಕ್ರಿಯೆಯಲ್ಲಿ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು. ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇತ್ತೀಚೆಗ್ನಡೆದ 2024–25ನೇ ಸಾಲಿನ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಕೃಷಿ ಹುಟ್ಟುವಳಿಯಿಂದ ಸೂರ್ಯಕಾಂತಿ ಖರೀದಿಸುವ ಕುರಿತು ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ತೆರೆಯಲಾಗುವ ಸೂರ್ಯಕಾಂತಿ ಹುಟ್ಟುವಳಿ ಖರೀದಿ ಕೇಂದ್ರಗಳಲ್ಲಿ



ಖರೀದಿಸಲಾಗುವ ಎಫ್‌ಎಕ್ಯೂ ಗುಣಮಟ್ಟ ಪರಿಶೀಲನೆಗಾಗಿ ಗ್ರೇಡರ್‌ಗಳನ್ನು ನೇಮಕ ಮಾಡಬೇಕು ಮತ್ತು ಅವರಿಗೆ ಎಫ್‌ಎಕ್ಯೂ ಗ್ರೇಡಿಂಗ್ ತರಬೇತಿ ನೀಡಬೇಕು. ಸರ್ಕಾರದ ಆದೇಶಾನುಸಾರ ಪ್ರತಿ ಎಕರೆಗೆ 4 ಕ್ವಿಂಟಲ್ ಗರಿಷ್ಠ ಪ್ರಮಾಣ ಹಾಗೂ ಪ್ರತಿ ರೈತ–ರಿಂದ ಗರಿಷ್ಠ 20 ಕ್ವಿಂಟಾಲ್ ಸೂರ್ಯಕಾಂತಿ ಖರೀದಿಸಬೇಕು. ಸರ್ಕಾರದ ಬೆಂಬಲ ಬೆಲೆಯಲ್ಲಿ ಸೂರ್ಯಕಾಂತಿ ಹುಟ್ಟುವಳಿಯ ಖರೀದಿ ಕುರಿತು ರೈತರು ಸದುಪಯೋಗಪಡೆದುಕೊಳ್ಳಲು ರೈತರಿಗೆ ತಿಳುವಳಿಕೆ ನೀಡಲು ಕರಪತ್ರಗಳ ಮೂಲಕ ಹಾಗೂ ವ್ಯಾಪಕ ಪ್ರಚಾರ ಕೈಗೊಳ್ಳುವುದರ ಮೂಲಕ ಹೆಚ್ಚಿನ ಸಂಖ್ಯೆಯಲ್ಲಿ ರೈತರು ಯೋಜನೆಯ ಲಾಭ ಪಡೆಯಲು ಅನುಕೂಲವಾಗುವಂತೆ ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

> ಕೇಂದ್ರ ಸರ್ಕಾರದ ಬೆಂಬಲ ಬೆಲೆ ಮಾರ್ಗಸೂಚಿಯನ್ವಯ ಜಿಲ್ಲೆಯ 9 ಕಡೆಗಳಲ್ಲಿನ ಸೂರ್ಯಕಾಂತಿ ಖರೀದಿ ಕೇಂದ್ರಗಳು: ಗದಗ–ಬಳಗಾನೂರು, ಹೊಂಬಳ, ಶಿರಹಟ್ಟಿ–ರಣತೂರ, ಶಿಗ್ಲಿ, ರೋಣ– ಅಬ್ಬಿಗೇರಿ, ನರಗುಂದ–ಕಣಕಿಕೊಪ್ಪ, ನರಗುಂದ, ಮುಂಡರಗಿ–ಬರದೂರು, ಕಲಕೇರಿ.

ಕೃಷಿ ಮಾರಾಟ ಇಲಾಖೆಯ ಸಹಾಯಕ ನಿರ್ದೇಶಕರಾದ ಸುಧಾ ಬಂಡಿ ಮಾತನಾಡಿ, ಎಫ್.ಎ.ಕ್ಯೂ ಗುಣಮಟ್ಟದ ಸೂರ್ಯಕಾಂತಿ ಹುಟ್ಟುವಳಿಗೆ ಪ್ರತಿ ಕ್ವಿಂಟಾಲ್‌ಗೆ ರೂ 7,280ರಂತೆ ಕೇಂದ್ರ ಸರ್ಕಾರದ ಬೆಂಬಲ ಬೆಲೆ ಮಾರ್ಗಸೂಚಿಗಳನ್ವಯ, ಸರ್ಕಾರದ ಆದೇಶದ ಅನುಸಾರ ಎನ್.ಸಿ.ಸಿ.ಎಫ್ ಸಂಸ್ಥೆಯನ್ನು ಕೇಂದ್ರದ ಖರೀದಿ ಏಜೆನ್ಸಿಯಾಗಿ ಹಾಗೂ ಕರ್ನಾಟಕ ಸಹಕಾರ ಎಣ್ಣೆ ಬೀಜ ಬೆಳೆಗಾರರ ಮಹಾ ಮಂಡಳಿ ನಿಯಮಿತ (ಕೆಓಎಫ್) ಬೆಂಗಳೂರು ಇವರನ್ನು ರಾಜ್ಯ ಮಟ್ಟದ ಖರೀದಿ ಏಜೆನ್ಸಿಯಾಗಿ ನೇಮಿಸಿದ್ದು, ರೈತರು ನೋಂದಣಿ ಕಾಲಾವಧಿಯನ್ನು 80 ದಿನಗಳವರೆಗೆ ಹಾಗೂ ಖರೀದಿ ಅವಧಿಯನ್ನು 90 ದಿನಗಳವರೆಗೆ ನೋಂದಣಿ ಕಾರ್ಯದ ಜೊತೆಗೆ ಖರೀದಿ ಪ್ರಕ್ರಿಯೆ ಪ್ರಾರಂಭಿಸಲು ಆದೇಶಿಸಲಾಗಿದೆ ಎಂದು ತಿಳಿಸಿದರು.

ಸಭೆಯಲ್ಲಿ ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ, ತೋಟಗಾರಿಕೆ ಇಲಾಖೆ, ಸಹಕಾರಿ ಸಂಘಗಳ ಉಪನಿಬಂಧಕರು, ಕೆಓಎಫ್ ವ್ಯವಸ್ಥಾಪಕರು ಹಾಜರಿದ್ದರು.


### ಜನಸಂಪರ್ಕ ಕಾರ್ಯಾಲಯದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಶಾಸಕ ಡಾ. ಲಮಾಣಿ

# ಕಾಂಗ್ರೆಸ್‌ನದ್ದು ಶೂನ್ಯ ಅಭಿವೃದ್ಧಿಯ ಸಮಾವೇಶ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಕಾಂಗ್ರೆಸ್ ಸರ್ಕಾರ ಚುನಾವಣಾ ಪೂರ್ವ ನೀಡಿದ ಭರವಸೆಗಳನ್ನು ಈಡೇರಿಸುವಲ್ಲಿ ಸಂಪೂರ್ಣ ವಿಫಲವಾಗಿದೆ. ಗ್ಯಾರಂಟಿ ಯೋಜನೆಗಳನ್ನು ಬಿಜೆಪಿ ಸ್ವಾಗತಿಸುತ್ತದೆ. ಆದರೆ ಉಚಿತ ಹೆಸರಿನಲ್ಲಿ ಸಚಿವರು, ಅಧಿಕಾರಿಗಳು ದುಡ್ಡು ಮಾಡಿಕೊಳ್ಳುತ್ತಿದ್ದಾರೆ. ತಾಯಂದಿರು ಬ್ಯಾಂಕ್‌ಗಳಿಗೆ ನಿತ್ಯವೂ ಅಲೆದಾಡುತ್ತಿದ್ದಾರೆ. ಇಂತಹ ಪರಿಸ್ಥಿತಿಯಲ್ಲಿ ಕಾಂಗ್ರೆಸ್ ಪಕ್ಷ ಶೂನ್ಯ ಅಭಿವೃದ್ಧಿಯ ಸಮಾವೇಶ ಮಾಡುತ್ತಿರುವುದು ರಾಜ್ಯದ ಜನತೆಗೆ ಬೇಸರ ತರಿಸಿದೆ ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಅವರು ಮಂಗಳವಾರ ಶಿರಹಟ್ಟಿಯಲ್ಲಿ ಶಾಸಕ ಡಾ. ಚಂದ್ರು ಲಮಾಣಿ ಜನಸಂಪರ್ಕ ಕಾರ್ಯಾಲಯದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡುತ್ತಿದ್ದರು. ಕಾಂಗ್ರೆಸ್ ಸಮಾವೇಶ ಯಾವ ಮಂತ್ರಿಗಳಿಗೆ ಎಷ್ಟು ಹಣ ಹೋಗಿದೆ, ಕೆಪಿಸಿಸಿ ಉಸ್ತುವಾರಿಗೆ ಎಷ್ಟು ಕೊಡಬೇಕೆನ್ನುವ ಸಲುವಾಗಿ ಮಾಡಿದ ಸಮಾವೇಶವಾಗಿದೆ. ರಾಜ್ಯದಲ್ಲಿ ಭ್ರಷ್ಟಾಚಾರ ತಾಂಡವವಾಡುತ್ತಿದ್ದು,




> ಇತ್ತೀಚೆಗೆ ಶಿರಹಟ್ಟಿ ತಾಲೂಕಿನ, ಶಿವಮೊಗ್ಗ ಜಿಲ್ಲೆ ಕೂಡ್ಲಿಗಿ ಮಠಕ್ಕೆ ಸಂಬಂಧಿಸಿದ 22 ಎಕರೆ ಆಸ್ತಿಯನ್ನು ಪ್ರಭಾವಿಯೊಬ್ಬರೂ ತಮ್ಮ ಹೆಸರಿಗೆ ಬರೆಯಿಸಿಕೊಂಡಿರುವುದು ವಿಷಾದದ ಸಂಗತಿ. ತಹಸೀಲ್ದಾರರು ಮತ್ತು ಇತರೆ ಅಧಿಕಾರಿಗಳು ಇದರಲ್ಲಿ ಭಾಗಿಯಾಗಿದ್ದಾರೆ. ಈ ಬಗ್ಗೆ ಮೇಲಾಧಿಕಾರಿಗಳ ಗಮನಕ್ಕೆ ತರಲಾಗಿದೆ ಎಂದು ಡಾ. ಚಂದ್ರು ಲಮಾಣಿ ತಿಳಿಸಿದರು.

ಎಲ್ಲ ಸರಕಾರಿ ಕಚೇರಿಗಳಲ್ಲಿ ಏಜೆಂಟರು ಹುಟ್ಟಿಕೊಂಡಿದ್ದಾರೆ. ಹೀಗಾಗಿ ಇದು ವಸೂಲಿ ಸರಕಾರ ಮತ್ತು ಹಗರಣಗಳ ಸರಮಾಲೆ ನೀಡಿದ ಸರಕಾರವಾಗಿದೆ ಎಂದು ಆರೋಪಿಸಿದರು.

ಶಕ್ತಿ ಯೋಜನೆಗೆ ಹೆಚ್ಚಿಗೆ ಬಸ್‌ಗಳನ್ನು ಬಿಡಲಿಲ್ಲ. ಸಿಬ್ಬಂದಿಗಳ ನೇಮಕವಾಗಲಿಲ್ಲ. ಇದರಿಂದ ಶಾಲಾ–ಕಾಲೇಜುಗಳ ವಿದ್ಯಾರ್ಥಿಗಳು ನಿತ್ಯವೂ ನರಕಯಾತನೆ ಅನುಭವಿಸುತ್ತಿದ್ದಾರೆ. ಗೃಹಲಕ್ಷ್ಮೀ ಯೋಜನೆಯಲ್ಲಿಯೂ ಸಹ 3–4 ತಿಂಗಳುಗಳಿಂದ ಬ್ಯಾಂಕ್ ಖಾತೆಗೆ ಹಣ ಜಮಾ ಆಗಿಲ್ಲ. ಉಚಿತ ವಿದ್ಯುತ್ ನೀಡಿ ಬೇರೆಯವರಿಗೆ ದುಪ್ಪಟ್ಟು ಹಣ ವಸೂಲಿ ಮಾಡುತ್ತಿದೆ. ಯುವನಿಧಿ ಯೋಜನೆಯನ್ನು ಎಷ್ಟು ಜನಕ್ಕೆ ನೀಡುತ್ತಿದ್ದಾರೆಂಬ ಸ್ಪಷ್ಟ ಮಾಹಿತಿ ಇಲ್ಲ. ಇದೊಂದು ನ್ಯೂನತೆಗಳ ಸಮಾವೇಶ ಎಂದರು.

ಈ ಸಂದರ್ಭದಲ್ಲಿ ನಗರ ಘಟಕದ ಅಧ್ಯಕ್ಷ ನಾಗರಾಜ ಲಕ್ಕುಂಡಿ, ಜಾನು ಲಮಾಣಿ, ಮಹಿಳಾ ತಾಲೂಕಾಧ್ಯಕ್ಷೆ ನಂದಾ ಪಲ್ಲೇದ, ಸಂದೀಪ ಕಪ್ಪತ್ತನವರ, ಬಸವರಾಜ ವಡವಿ, ಅಕ್ಬರಸಾಬ ಯಾದಗಿರಿ ಮುಂತಾದವರು ಉಪಸ್ಥಿತರಿದ್ದರು.

## ರಾಜ್ಯ ಮಟ್ಟದ ಮುಕ್ತ ಯೋಗಾಸನ ಸ್ಪರ್ಧೆ ಜೂ.1ಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಶರಣರ ಜ್ಞಾನ ಯೋಗಾಶ್ರಮ ಟ್ರಸ್ಟ್ ವತಿಯಿಂದ ಗದಗ ಜಿಲ್ಲೆಯಲ್ಲಿ ಪ್ರಥಮ ಬಾರಿಗೆ 11ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯ ಅಂಗವಾಗಿ ರಾಜ್ಯ ಮಟ್ಟದ ಮುಕ್ತ ಯೋಗಾಸನ ಸ್ಪರ್ಧೆಯನ್ನು ಜೂನ್ 1ರಂದು ಬೆಳಿಗ್ಗೆ 7 ಗಂಟೆಗೆ ನಗರದ ಕನಕ ಭವನ ಕಲ್ಯಾಣ ಮಂಟಪ (ಮುಳಗುಂದ ರಸ್ತೆ)ದಲ್ಲಿ ಆಯೋಜಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸುನೀಲ ಎಸ್.ಹಿರೇಮಠ ಮೊ-8884672515 ಇವರನ್ನು ಸಂಪರ್ಕಿಸಬಹುದಾಗಿದೆ. ರಾಜ್ಯದ ಎಲ್ಲಾ ಜಿಲ್ಲೆಯಿಂದ ಹೆಚ್ಚಿನ ಸಂಖ್ಯೆಯಲ್ಲಿ ಸ್ಪರ್ಧಾಳುಗಳು ಭಾಗವಹಿಸಿ ಯೋಗಾಸನ ಸ್ಪರ್ಧೆಯನ್ನು ಯಶಸ್ವಿಗೊಳಿಸಬೇಕೆಂದು ಸುನೀಲ ಎಸ್.ಹಿರೇಮಠರವರು ಪತ್ರಿಕಾ ಪ್ರಕಟಣೆಯ ಮೂಲಕ ವಿನಂತಿಸಿದ್ದಾರೆ.

## ಕೇಂದ್ರ ಸ್ಥಾನ ಬಿಡದಂತೆ ಡಿಸಿ ಆದೇಶ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಹವಾಮಾನ ಇಲಾಖೆಯ ಮುನ್ಸೂಚನೆಯಂತೆ, ಧಾರವಾಡ ಜಿಲ್ಲೆಯಲ್ಲಿ ಭಾರೀ ಮಳೆಯಾಗುವ (Orange Alert) ಸಾಧ್ಯತೆ ಇದೆ. ಭಾರೀ ಮಳೆಯಿಂದ ನೆರೆ ಹಾವಳಿ, ಜನ-ಜಾನವಾರು ಜೀವಹಾನಿ, ರಸ್ತೆ ಹಾನಿ, ಸೇತುವೆ ಹಾನಿ, ಸಾರ್ವಜನಿಕ ಆಸ್ತಿ ಹಾನಿಗಳಿಂದ ನಾಗರಿಕ ಮೂಲಭೂತ ಸೌಕರ್ಯಕ್ಕೆ ತೊಂದರೆ ಉಂಟಾಗದಂತೆ ಕ್ರಮ ವಹಿಸುವ ನಿಟ್ಟಿನಲ್ಲಿ ಜಿಲ್ಲೆಯ ಎಲ್ಲ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು ಕಡ್ಡಾಯವಾಗಿ ತಮ್ಮ ತಮ್ಮ ಕೇಂದ್ರ ಸ್ಥಾನದಲ್ಲಿದ್ದು, ಮಳೆಹಾನಿಯಿಂದ ತೊಂದರೆಗಿಡಾದ ಸಾರ್ವಜನಿಕರ ಮೂಲಭೂತ ಸೌಕರ್ಯಗಳನ್ನು ತುರ್ತಾಗಿ ಸರಿಪಡಿಸಿ ಕ್ರಮವಹಿಸಬೇಕು.

ಆದ್ದರಿಂದ ಜಿಲ್ಲೆಯ ಎಲ್ಲಾ ಇಲಾಖೆಯ ಜಿಲ್ಲಾಮಟ್ಟದ, ತಾಲೂಕು ಮಟ್ಟದ ಅಧಿಕಾರಿಗಳು ಹಾಗೂ ಅವರ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳು ಅನಿವಾರ್ಯ ಪರಿಸ್ಥಿತಿಯಲ್ಲಿ ರಜೆಯ ಮೇಲೆ ತೆರಳಬೇಕಾದಲ್ಲಿ ಜಿಲ್ಲಾಧಿಕಾರಿಗಳ ಪೂರ್ವಾನುಮತಿ ಪಡೆದು, ರಜೆಯ ಮೇಲೆ ತೆರಳಬೇಕು ಎಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರೂ ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ಆದೇಶಿಸಿದ್ದಾರೆ.

**2025-26ನೇ ಸಾಲಿಗೆ ಮುಂಗಾರು ಹಂಗಾಮಿಗೆ ಪರಿಕರ ಸಿದ್ಧತೆಯ ಚಟುವಟಿಕೆ**

# ಸಂಯುಕ್ತ ರಸಗೊಬ್ಬರಗಳನ್ನು ಬಳಸಿ

■ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿನ ಮುಂಗಾರು ಹಂಗಾಮಿಗೆ ಹೆಸರು-809 ಕ್ವಿಂ, ಮೆಕ್ಕೆ ಜೋಳ-4562 ಕ್ವಿಂ, ಶೇಂಗಾ-876 ಕ್ವಿಂ., ಹಾಗೂ ಹೈ.ಜೋಳ-18 ಕ್ವಿಂಟಾಲ್ ಸೇರಿದಂತೆ ಎಲ್ಲ ಬೆಳೆಗಳು ಸೇರಿ 6000 ಕ್ವಿಂ. ಬಿತ್ತನೆ ಬೀಜಗಳ ಬೇಡಿಕೆಯಿದ್ದು, ಅದರನ್ವಯ ರೈತಸಂಪರ್ಕ ಕೇಂದ್ರಗಳಲ್ಲಿ ಬೀಜಗಳನ್ನು ದಾಸ್ತಾನು ಮಾಡಿಕೊಳ್ಳಲಾಗುತ್ತಿದೆ.

ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ 17 ಮೇ 2025ರವರೆಗೆ ಯೂರಿಯಾ 5693 ಮೆ.ಟನ್, ಡಿ.ಎ.ಪಿ. 1754 ಮೆ.ಟನ್, ಎಂ.ಓ.ಪಿ. 719 ಮೆ.ಟನ್, ಸಂಯುಕ್ತ ರಸಗೊಬ್ಬರಗಳು 5217 ಮೆ.ಟನ್ ಹಾಗೂ ಎಸ್.ಎಸ್.ಪಿ. 200 ಮೆ.ಟನ್ ಸೇರಿ ಒಟ್ಟು 13582 ಮೆ.ಟನ್‌ಗಳಷ್ಟು ರಸಗೊಬ್ಬರಗಳು ದಾಸ್ತಾನು ಇದ್ದು ಈಗಾಗಲೇ 11016 ಮೆ.ಟನ್‌ಗಳಷ್ಟು ರಸಗೊಬ್ಬರಗಳು ಮಾರಾಟವಾಗಿವೆ.

ಜಿಲ್ಲೆಯಲ್ಲಿ ರೈತರು ಒಂದು ಅಥವಾ ಎರಡು ಪೋಷಕಾಂಶಗಳನ್ನು ಮಾತ್ರ ಒದಗಿಸುವ ಯೂರಿಯಾ ಹಾಗೂ ಡಿ.ಎ.ಪಿ. ರಸಗೊಬ್ಬರಗಳನ್ನು ಬಳಸುತ್ತಿದ್ದು, ಇವುಗಳಿಂದ ಸಾರಜನಕ ಹಾಗೂ ರಂಜಕ ಪೋಷಕಾಂಶಗಳನ್ನು ಮಾತ್ರ ಬೆಳೆಗಳಿಗೆ ಒದಗಿಸಿದಂತಾಗುತ್ತದೆ. ಆದರೆ, ಬೆಳೆಗಳಿಗೆ ಬರ ಮತ್ತು ರೋಗ ನಿರೋಧಕ ಶಕ್ತಿ ನೀಡುವ ಪೊಟ್ಯಾಶ್ ಪೋಷಕಾಂಶವನ್ನು ನೀಡಿದಂತಾಗುವದಿಲ್ಲ. ಅಲ್ಲದೇ ಪೊಟ್ಯಾಶ್ ಪೋಷಕಾಂಶವು ಸಸ್ಯಗಳ ವಿವಿಧ ಶಾರೀರಿಕ ಪ್ರಕ್ರಿಯೆಗಳ ಮೇಲೆ ಪರಿಣಾಮ ಬೀರುತ್ತದೆ. ಕಾರಣ, ಡಿ.ಎ.ಪಿ.ರಸಗೊಬ್ಬರವನ್ನು ಮಾತ್ರ ಬಳಸದೇ, ರೈತ ಬಾಂಧವರು ಪೊಟ್ಯಾಶ್ ಪೋಷಕಾಂಶವಿರುವ ಸಂಯುಕ್ತ ರಸಗೊಬ್ಬರಗಳನ್ನು ಬಳಸಲು ಕೋರಿದೆ.

ರೈತ ಬಾಂಧವರು ಈಗ ಮಾರುಕಟ್ಟೆಯಲ್ಲಿ ಲಭ್ಯವಿರುವ ನ್ಯಾನೋ ಡಿ.ಎ.ಪಿ.ಯ ಉಪಯೋಗ ಪಡೆಯಲು ಕೋರಿದೆ. ನ್ಯಾನೋ ಡಿ.ಎ.ಪಿ. ಎಲ್ಲಾ ಬೆಳೆಗಳಿಗೆ ಲಭ್ಯವಿರುವ ಸಾರಜನಕ(ಓ) ಮತ್ತು ರಂಜಕದ(P2O5) ಪರಿಣಾಮಕಾರಿ ಮೂಲವಾಗಿದೆ ಮತ್ತು ಬೆಳೆದು ನಿಂತಿರುವ ಬೆಳೆಗಳಲ್ಲಿ ಸಾರಜನಕದ ಮತ್ತು ರಂಜಕದ ಕೊರತೆಯನ್ನು ಸರಿಪಡಿಸಲು ಸಹಾಯ ಮಾಡುತ್ತದೆ. ನ್ಯಾನೋ ಡಿ.ಎ.ಪಿ.ಯು ಶೇ.8 ಸಾರಜನಕ ಹಾಗೂ ಶೇ.16 ರಂಜಕವನ್ನು ಹೊಂದಿದೆ. ಅದರ ಕಣದ ಗಾತ್ರವು ಅತಿ ಕಡಿಮೆ ಇರುವುದರಿಂದ ಬೀಜದ ಮೇಲ್ಮೈ ಒಳಗೆ ಅಥವಾ ಸ್ಟೊಮಾಟಾ ಮತ್ತು ಸಸ್ಯದ ಇತರೆ ಭಾಗಗಳ ಮೂಲಕ ಸುಲಭವಾಗಿ ಪ್ರವೇಶಿಸಲು ಅನುವು ಮಾಡಿಕೊಡುತ್ತದೆ.

ಸಸ್ಯ ವ್ಯವಸ್ಥೆಯೊಳಗೆ ನ್ಯಾನೋ ಡಿ.ಎ.ಪಿ.ಯ ಉತ್ತಮ ಹರಡುವಿಕೆ ಸಾಮರ್ಥ್ಯ ಮತ್ತು ಸಂಯೋಜನೆಯು ಹೆಚ್ಚಿನ ಬೀಜ ಚೈತನ್ಯ, ಹೆಚ್ಚಿನ ಕ್ಲೋರೋಫಿಲ್, ಉತ್ತಮ ಗುಣಮಟ್ಟ ಮತ್ತು ಬೆಳೆ ಇಳುವರಿಯಲ್ಲಿ ಹೆಚ್ಚಳಕ್ಕೆ ಕಾರಣವಾಗುತ್ತದೆ. ಇದರ ಹೊರತಾಗಿ ಪರಿಸರಕ್ಕೆ ಹಾನಿಯಾಗದಂತೆ ಬೆಳೆಗಳ ಪೋಷಕಾಂಶದ ಅಗತ್ಯವನ್ನು ಪೂರೈಸುತ್ತದೆ. ಮಾರುಕಟ್ಟೆಯಲ್ಲಿ ಹರಳು ರೂಪದ ಡಿ.ಎ.ಪಿ.ಕೊರತೆಯುಂಟಾದಾಗ ರೈತ ಬಾಂಧವರು ನ್ಯಾನೋ ಡಿ.ಎ.ಪಿ. ಉಪಯೋಗಿಸಬಹುದಾಗಿದೆ. ನ್ಯಾನೋ ಡಿ.ಎ.ಪಿ.ಯ ಬೆಲೆ 500 ಮಿ.ಲೀ.ಗೆ ರೂ.600 ಆಗಿದೆ.

ಇದೇ ರೀತಿ 2-4 ಮಿ.ಲೀ. ನ್ಯಾನೋ ಯೂರಿಯಾವನ್ನು 1 ಲೀ.ನೀರಿಗೆ ಬೆರೆಸಿ ಬೆಳೆಯ ಸಕ್ರಿಯ ಬೆಳವಣಿಗೆ (ಮೊಳಕೆ ಬಂದ 30-35 ದಿನಗಳ ನಂತರ ಅಥವಾ ಸಸಿ ನೆಟ್ಟ 20-25ದಿನಗಳ ನಂತರ) ಹಂತದಲ್ಲಿ ಸಿಂಪಡಿಸಬಹುದು. ಮೊದಲ ಸಿಂಪರಣೆಯ 20-25 ನಂತರ ಮತ್ತೊಮ್ಮೆ ಸಿಂಪರಣೆ ತೆಗೆದುಕೊಳ್ಳಬಹುದು.

ಪ್ರತಿ ಸಿಂಪರಣೆಗೆ ಎಕರೆಗೆ 250-500 ಮಿಲೀ ನ್ಯಾನೊ ಯೂರಿಯಾ ಪ್ಲಸ್(ದ್ರವ)ವನ್ನು ಸಿಂಪಡಿಸುವುದು. ನ್ಯಾನೋ ಯೂರಿಯಾ ಬೆಲೆ 500 ಮಿ.ಲೀ.ಗೆ ರೂ.225 ಆಗಿದೆ ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ನ್ಯಾನೋ ಡಿ.ಎ.ಪಿ.ಯನ್ನು ಏಕದಳ ಧಾನ್ಯಗಳಾದ ಗೋಧಿ, ಬಾರ್ಲಿ ಗೋ.ಜೋಳ, ಸಿರಿಧಾನ್ಯಗಳು, ಭತ್ತ ಇತ್ಯಾದಿ, ದ್ವಿದಳ ಧಾನ್ಯಗಳಾದ ಕಡಲೆ, ತೊಗರಿ, ಚನ್ನಂಗಿ, ಹೆಸರು, ಉದ್ದು ಇತ್ಯಾದಿ, ಎಣ್ಣೆಕಾಳು ಬೆಳೆಗಳಾದ ಸಾಸಿವೆ, ಶೇಂಗಾ, ಸೋಯಾಬೀನ್, ಸೂರ್ಯಕಾಂತಿ ಇತ್ಯಾದಿ, ತರಕಾರಿಗಳಾದ ಬಟಾಟಿ, ಈರುಳ್ಳಿ, ಬೀನ್ಸ್, ಬೆಳ್ಳುಳ್ಳಿ, ಬಟಾಣಿ, ಇತ್ಯಾದಿಗಳಲ್ಲಿ ಹಾಗೂ ಹತ್ತಿ ಮತ್ತು ಕಬ್ಬು ಬೆಳೆಗಳಲ್ಲಿಯೂ ಕೂಡ ಉಪಯೋಗಿಸಬಹುದಾಗಿದೆ.

# ಸಂಭಾಲ್: ಜಾಮಾ ಮಸೀದಿ ಸರ್ವೆ ಆದೇಶ ಎತ್ತಿಹಿಡಿದ ಅಲಹಾಬಾದ್ ಹೈಕೋರ್ಟ್

■ವಿಜಯಸಾಕ್ಷಿ ಸುದ್ದಿ, ಸಂಭಾಲ್

ವಿಚಾರಣಾ ನ್ಯಾಯಾಲಯವು ಹೊರಡಿಸಿದ ಸಂಭಾಲ್‌ನಲ್ಲಿರುವ ಶಾಹಿ ಜಾಮಾ ಮಸೀದಿಯ ಸರ್ವೆ ಆದೇಶವನ್ನು ಅಲಹಾಬಾದ್ ಹೈಕೋರ್ಟ್ ಸೋಮವಾರ ಎತ್ತಿಹಿಡಿದಿದೆ.

ಸರ್ವೆ ಆದೇಶದ ವಿರುದ್ಧ ಮಸೀದಿ ಸಮಿತಿ ಸಲ್ಲಿಸಿದ್ದ ಪರಿಷ್ಕರಣಾ ಅರ್ಜಿಯನ್ನು ತಿರಸ್ಕರಿಸಿದ ನ್ಯಾಯಾಲಯವು, ವಿಚಾರಣಾ ನ್ಯಾಯಾಲಯದ ಆದೇಶದಲ್ಲಿ ಯಾವುದೇ ಸಮಸ್ಯೆಗಳಿಲ್ಲ ಎಂದು ಹೇಳಿದೆ. ಸಂಭಾಲ್‌ನ ಜಿಲ್ಲಾ ನ್ಯಾಯಾಲಯದ ಮುಂದೆ ಬಾಕಿ ಇರುವ ಮೂಲ ಮೊಕದ್ದಮೆಯಲ್ಲಿ ನಡೆಯುತ್ತಿರುವ ವಿಚಾರಣಾ ನ್ಯಾಯಾಲಯದ ವಿಚಾರಣೆಗೆ ತಡೆ ನೀಡುವಂತೆ ಸಮಿತಿಯು ಕೋರಿತ್ತು.

ಮಸೀದಿ ಸಮಿತಿ ಮತ್ತು ವಾದಿ ಹರಿಶಂಕರ್ ಜೈನ್ ಮೊಕದ್ದಮೆಯ ವಕೀಲರು ಮತ್ತು ಭಾರತೀಯ ಪುರಾತತ್ವ ಸರ್ವೇಕ್ಷಣಾ ಇಲಾಖೆಯ ವಕೀಲರನ್ನು ಆಲಿಸಿದ ನಂತರ ನ್ಯಾಯಮೂರ್ತಿ ರೋಹಿತ್ ರಂಜನ್ ಅಗರ್ವಾಲ್ ಈ ವಿಷಯದ ಕುರಿತು ತನ್ನ ಆದೇಶವನ್ನು ಕಾಯ್ದಿರಿಸಿದ್ದರು.

ಶಾಹಿ ಜಾಮಾ ಮಸೀದಿಯ ನಿರ್ವಹಣಾ ಸಮಿತಿಯು ಮೊಕದ್ದಮೆ ಮತ್ತು ವಕೀಲ ಆಯುಕ್ತರ ಮೂಲಕ ಸರ್ವೆ ಮಾಡಲು ನಿರ್ದೇಶಿಸಿದ ಸಂಭಾಲ್ ನ್ಯಾಯಾಲಯದ ಆದೇಶವನ್ನು ಪ್ರಶ್ನಿಸಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿತ್ತು. ಸಂಭಾಲ್‌ನಲ್ಲಿರುವ ದೇವಾಲಯವನ್ನು ಕೆಡವಿದ ನಂತರ ಶಾಹಿ ಇದ್ಗಾ ಮಸೀದಿಯನ್ನು ನಿರ್ಮಿಸಲಾಗಿದೆ ಎಂದು ಜೈನ್ ಮತ್ತು ಇತರ ಏಳು ಮಂದಿ ಸಿವಿಲ್ ನ್ಯಾಯಾಧೀಶರು, ಹಿರಿಯ ವಿಭಾಗದ ಮುಂದೆ ಮೊಕದ್ದಮೆ ಹೂಡಿದ್ದರು.

ವಾದಿಗಳ ಮೂಲ ಅರ್ಜಿಯಲ್ಲಿ ಮೊಘಲ್ ಚಕ್ರವರ್ತಿ ಬಾಬರ್ 1526ರಲ್ಲಿ ಸಂಭಾಲ್‌ನಲ್ಲಿರುವ ಹರಿಹರ ಮಂದಿರವನ್ನು ಕೆಡವಿ ಮಸೀದಿಯನ್ನು ನಿರ್ಮಿಸಿದ್ದಾನೆ ಎಂದು ಹೇಳಲಾಗಿದೆ. ಹೈಕೋರ್ಟ್ ಈ ಹಿಂದೆ ವಿಚಾರಣಾ ನ್ಯಾಯಾಲಯದ ಮುಂದೆ ಮುಂದಿನ ವಿಚಾರಣೆಗೆ ತಡೆ ನೀಡಿತ್ತು.

ಮೊಹಲ್ಲಾ ಕೋಟ್ ಪೂರ್ವಿಯಲ್ಲಿರುವ ಸಂಭಾಲ್ ಜಿಲ್ಲೆಯ ಧಾರ್ಮಿಕ ಸ್ಥಳಕ್ಕೆ ಪ್ರವೇಶದ ಹಕ್ಕನ್ನು ಮೊಕದ್ದಮೆಯಲ್ಲಿ ಮೂಲ ವಾದಿಗಳು ಪ್ರತಿಪಾದಿಸಿದ್ದಾರೆ.

ನವೆಂಬರ್ 19, 2024 ರಂದು ಮಧ್ಯಾಹ್ನ ಮೊಕದ್ದಮೆ ಹೂಡಲಾಗಿದೆ ಎಂದು ಮಸೀದಿ ಸಮಿತಿಯು ಆರೋಪಿಸಿದೆ ಮತ್ತು ಕೆಲವೇ ಗಂಟೆಗಳಲ್ಲಿ, ನ್ಯಾಯಾಧೀಶರು ವಕೀಲ ಆಯುಕ್ತರನ್ನು ನೇಮಿಸಿ ಮಸೀದಿಯಲ್ಲಿ ಆರಂಭಿಕ ಸಮೀಕ್ಷೆಯನ್ನು ನಡೆಸುವಂತೆ ನಿರ್ದೇಶಿಸಿದರು, ಇದನ್ನು ಅದೇ ದಿನ ಮತ್ತು ಮತ್ತೆ ನವೆಂಬರ್ 24, 2024 ರಂದು ಮಾಡಲಾಯಿತು.

ನವೆಂಬರ್ 29ರೊಳಗೆ ಸಮೀಕ್ಷೆಯ ವರದಿಯನ್ನು ತನ್ನ ಮುಂದೆ ಸಲ್ಲಿಸುವಂತೆ ನ್ಯಾಯಾಲಯವು ನಿರ್ದೇಶಿಸಿತ್ತು.



## ಸಿಂಗಾಪುರ, ಹಾಂಗ್ ಕಾಂಗ್‌ನಲ್ಲಿ ಕೋವಿಡ್ ಹೆಚ್ಚಳ; ಭಾರತದಾದ್ಯಂತ 257 ಜನರಲ್ಲಿ ಪಾಸಿಟಿವ್

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಸಿಂಗಾಪುರ ಮತ್ತು ಹಾಂಗ್ ಕಾಂಗ್‌ನಲ್ಲಿ ಕೋವಿಡ್ ಪಾಸಿಟಿವ್ ಹೆಚ್ಚಳದ ವರದಿಗಳ ಹಿನ್ನೆಲೆಯಲ್ಲಿ, ಮುಂಜಾಗ್ರತಾ ಕ್ರಮವಾಗಿ ಭಾರತ ಸರ್ಕಾರದ ಆರೋಗ್ಯ ಸೇವೆಗಳ ಮಹಾನಿರ್ದೇಶಕರು (ಡಿಜಿಹೆಚ್ಎಸ್) ಸೋಮವಾರ ಪರಿಶೀಲನಾ ಸಭೆ ನಡೆಸಿದರು.

ಪ್ರಾಥಮಿಕ ವರದಿಗಳ ಪ್ರಕಾರ, ವರದಿಯಾದ ಪ್ರಕರಣಗಳು ಹೆಚ್ಚಾಗಿ ಸೌಮ್ಯವಾಗಿವೆ, ಅಸಾಧಾರಣ ತೀವ್ರತೆ ಅಥವಾ ಮರಣಕ್ಕೆ ಸಂಬಂಧಿಸಿಲ್ಲ ಎಂದು ಸರ್ಕಾರ ಹೇಳಿದೆ. ಭಾರತದಲ್ಲಿಯೂ ಪರಿಸ್ಥಿತಿ ನಿಯಂತ್ರಣದಲ್ಲಿದೆ ಎಂದು ಕೇಂದ್ರ ಸರ್ಕಾರ ಹೇಳಿದೆ.

ಭಾರತದಲ್ಲಿ ಪ್ರಸ್ತುತ ಕೋವಿಡ್ ಪ್ರಕರಣಗಳು 257 ರಷ್ಟಿವೆ ಎಂದು ಸರ್ಕಾರ ತಿಳಿಸಿದೆ. ಈ ಎಲ್ಲಾ ಪ್ರಕರಣಗಳು ಸೌಮ್ಯವಾಗಿದ್ದು ಆಸ್ಪತ್ರೆಗೆ ದಾಖಲಾಗುವ ಅಗತ್ಯವಿಲ್ಲ ಎಂದು ಹೇಳಿದೆ.

ಡಿಜಿಹೆಚ್‌ಎಸ್ ಸಭೆಯಲ್ಲಿ ರಾಷ್ಟ್ರೀಯ ರೋಗ ನಿಯಂತ್ರಣ ಕೇಂದ್ರ (ಎನ್‌ಸಿಡಿಸಿ), ತುರ್ತು ವೈದ್ಯಕೀಯ ಪರಿಹಾರ (ಇಎಂಆರ್) ವಿಭಾಗ, ವಿಪತ್ತು ನಿರ್ವಹಣಾ ಕೋಶ, ಭಾರತೀಯ ವೈದ್ಯಕೀಯ ಸಂಶೋಧನಾ ಮಂಡಳಿ (ಐಸಿಎಂಆರ್) ಮತ್ತು ಕೇಂದ್ರ ಸರ್ಕಾರಿ ಆಸ್ಪತ್ರೆಗಳ ಅಧಿಕಾರಿಗಳು ಭಾಗವಹಿಸಿದ್ದರು.

ಕೇಂದ್ರ ಆರೋಗ್ಯ ಸಚಿವಾಲಯವು ಪರಿಸ್ಥಿತಿಯನ್ನು ಸೂಕ್ಷ್ಮವಾಗಿ ಗಮನಿಸುತ್ತಿದೆ, ಸೂಕ್ತ ಕ್ರಮಗಳನ್ನು ಜಾರಿಗೆ ತರಲು ಮತ್ತು ಮೇಲ್ವಿಚಾರಣೆ ಮಾಡುವಲ್ಲಿ ಜಾಗರೂಕವಾಗಿದೆ ಎಂದು ಹೇಳಿದೆ.

**ಕ್ರಿಕೆಟಿಗ ಟ್ರಾವಿಸ್ ಹೆಡ್‌ಗೆ ಕೋವಿಡ್**

ಆಸ್ಟ್ರೇಲಿಯಾ ಕ್ರಿಕೆಟಿಗ, ಪ್ರಸ್ತುತ ಐಪಿಎಲ್‌ನಲ್ಲಿ ಸನ್‌ರೈಸರ್ಸ್ ಹೈದರಾಬಾದ್ ಪರ ಆಡುತ್ತಿರುವ ಪ್ರಮುಖ ಬ್ಯಾಟರ್ ಟ್ರಾವಿಸ್ ಹೆಡ್ ಅವರಿಗೆ ಕೋವಿಡ್ ತಗುಲಿದೆ ಎಂದು ತಂಡ ತಿಳಿಸಿದೆ. ನಿನ್ನೆ ಸಂಜೆ ಲಕ್ನೋ ವಿರುದ್ಧ ನಡೆದ



## ಪರೀಕ್ಷೆಗಳನ್ನು ವ್ಯವಸ್ಥಿತವಾಗಿ ನಡೆಸಿ



■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ 2025ನೇ ಎಸ್‌ಎಸ್‌ಎಲ್‌ಸಿ ಪರೀಕ್ಷೆ-2 ಪರೀಕ್ಷೆಗಳು ಮೇ 26ರಿಂದ ಜೂನ್ 2ರವರೆಗೆ ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 1.45 ಗಂಟೆಯವರೆಗೆ ನಡೆಯಲ್ಲಿದ್ದು, ಪರೀಕ್ಷೆಗಳನ್ನು ವ್ಯವಸ್ಥಿತವಾಗಿ, ಅಚ್ಚುಕಟ್ಟಾಗಿ ನಡೆಸಲು ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ಗದಗ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆ-2 ಕುರಿತು ಜರುಗಿದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಪರೀಕ್ಷೆಗಳಲ್ಲಿ ಯಾವುದೇ ಅಕ್ರಮಗಳು, ಅವ್ಯವಹಾರಗಳು ನಡೆಯದಂತೆ ನೋಡಿಕೊಳ್ಳಬೇಕು. ಜಿಲ್ಲೆಯ ಒಟ್ಟು 20 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆಗಳು ನಡೆಯಲಿದ್ದು, ಅಲ್ಲಿ ಕುಡಿಯುವ ನೀರು, ವಿದ್ಯುತ್ ವ್ಯವಸ್ಥೆ ಸೇರಿದಂತೆ ಮೂಲಭೂತ ಸೌಲಭ್ಯಗಳು ಇರುವಂತೆ ನೋಡಿಕೊಳ್ಳಬೇಕು. ಪರೀಕ್ಷಾ ಅವಧಿಯಲ್ಲಿ ಪರೀಕ್ಷಾ ಕೇಂದ್ರಗಳ ಸುತ್ತ ನಿಷೇಧಾಜ್ಞೆ ಜಾರಿಗೊಳಿಸಲಾಗಿದ್ದು, ಪರೀಕ್ಷಾ ಅವಧಿಯಲ್ಲಿ ಯಾವುದೇ ಲೋಪದೋಷಗಳಾಗದಂತೆ ಕ್ರಮ ವಹಿಸಬೇಕೆಂದು ನಿರ್ದೇಶನ ನೀಡಿದರು. ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರಡಿ ಮಾತನಾಡಿ, ಎಸ್‌ಎಸ್‌ಎಲ್‌ಸಿ-2 ಪರೀಕ್ಷೆಗಳು ಮೇ 26ರಿಂದ ಜೂನ್ 2ರವರೆಗೆ ಜಿಲ್ಲೆಯ 20 ಪರೀಕ್ಷಾ ಕೇಂದ್ರಗಳಲ್ಲಿ ಜರುಗಲಿದೆ. ಒಟ್ಟು 5532 ಅಭ್ಯರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. ಪರೀಕ್ಷಾ ಕೇಂದ್ರಗಳಲ್ಲಿ ಮೂಲಭೂತ ಸೌಲಭ್ಯ ಒದಗಿಸಲು ಕ್ರಮ ವಹಿಸಲಾಗಿದೆ. ಪರೀಕ್ಷೆಗಳು ಸುಗಮವಾಗಿ ನಡೆಯಲು ಸಕಲ ಸಿದ್ಧತೆಗೆ ಕ್ರಮ ವಹಿಸಲಾಗಿದೆ ಎಂದು ಸಭೆಗೆ ತಿಳಿಸಿದರು.

ಸಭೆಯಲ್ಲಿ ಪರೀಕ್ಷಾ ಕೇಂದ್ರಗಳ ಸುತ್ತ ಸೂಕ್ತ ಪೊಲೀಸ್ ಬಂದೋಬಸ್ತ್, ಮಾರ್ಗಾಧಿಕಾರಿಗಳ ವಾಹನ ವ್ಯವಸ್ಥೆ ಕುರಿತು ಚರ್ಚಿಸಲಾಯಿತು. ಸಭೆಯಲ್ಲಿ ಪರೀಕ್ಷಾ ಕೇಂದ್ರಗಳ ಮುಖ್ಯಸ್ಥರು, ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

## ರಾಷ್ಟ್ರ ದ್ರೋಹಿ ಹೇಳಿಕೆ ನೀಡಿರೋರನ್ನು ಗುಂಡಿಟ್ಟು ಕೊಲ್ಲಿ!

■ವಿಜಯಸಾಕ್ಷಿ ಸುದ್ದಿ, ವಿಜಯಪುರ

ರಾಷ್ಟ್ರ ದ್ರೋಹಿ ಹೇಳಿಕೆ ನೀಡೋರನ್ನು ಗುಂಡಿಟ್ಟು ಕೊಲ್ಲಿ ಎಂದು ಮಾಜಿ ಡಿಸಿಎಂ ಈಶ್ವರಪ್ಪ ಹೇಳಿದ್ದಾರೆ. ವಿಜಯಪುರದಲ್ಲಿ ಮಾತನಾಡಿದ ಅವರು, ಪ್ರಿಯಾಂಕ ಖರ್ಗೆ, ಸಂತೋಷ ಲಾಡ್, ದಿನೇಶ್ ಗುಂಡೂರಾವ್, ಕೊತ್ತೂರು ಮಂಜುನಾಥ್, ಹರಿಪ್ರಸಾದ್ ಹೇಳಿಕೆಗೆ ಈಶ್ವರಪ್ಪ ಈ ರೀತಿ ಹೇಳಿದ್ದಾರೆ.

ಜೂನಿಯರ್ ಕಾಂಗ್ರೆಸ್ ನಾಯಕರು ಮಾತ್ರ ಟೀಕೆ ಮಾಡುತ್ತಿದ್ದಾರೆ. ಸೀನಿಯರ್ ಖರ್ಗೆ ವಿಧಿ ಇಲ್ಲದೆ ಅಲ್ಲೊಂದು ಇಲ್ಲೊಂದು ಮಾತನಾಡುತ್ತಾರೆ. ಆದ್ರೆ ಪಾಕಿಸ್ತಾನ ಪರವಾಗಿ ಮರಿ ಖರ್ಗೆ ಇದ್ದಾರೆ. ಹರಿಪ್ರಸಾದ್, ಸಂತೋಷ್ ಲಾಡ್, ದಿನೇಶ್ ಗುಂಡೂರಾವ್ ಅವರಂತಹ ಕೆಲವರಿಗೆ ಮಾತ್ರ ಎಲ್ಲಿ ಇದ್ದೇವೆ. ಏನು ಮಾಡುತ್ತಿದ್ದೇವೆ. ಕಾಂಗ್ರೆಸ್ ನಾಯಕರು ಹೌದೋ, ಅಲ್ವೋ ಎಂದೇ ಗೊತ್ತಾಗುತ್ತಿಲ್ಲ. ಇವರ ಬಗ್ಗೆ ಕಾಂಗ್ರೆಸ್‌ನವರಿಂದಲೇ ಟೀಕೆ ಕೇಳಿಬರುತ್ತಿದೆ ಎಂದರು.

## ನ್ಯಾಯಾಂಗ ಸೇವೆಗೆ ಅರ್ಹತೆ ಪಡೆಯಲು ಮೂರು ವರ್ಷಗಳ ವಕೀಲಿಕೆ ಕಡ್ಡಾಯ: ಸುಪ್ರೀಂ ಕೋರ್ಟ್

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ನ್ಯಾಯಾಂಗ ಸೇವೆಗೆ ಸೇರಲು ಅಭ್ಯರ್ಥಿಯು ಕನಿಷ್ಠ ಮೂರು ವರ್ಷಗಳ ವಕೀಲಿಕೆ ಅನುಭವ ಹೊಂದಿರಬೇಕು ಎಂದು ಮಂಗಳವಾರ (ಮೇ.20) ಸುಪ್ರೀಂ ಕೋರ್ಟ್ ಮಹತ್ವದ ತೀರ್ಪು ನೀಡಿದೆ.

ಮುಖ್ಯ ನ್ಯಾಯಮೂರ್ತಿ (ಸಿಜೆಐ) ಬಿ.ಆರ್ ಗವಾಯಿ ಮತ್ತು ನ್ಯಾಯಮೂರ್ತಿಗಳಾದ ಎ.ಜಿ ಮಸಿಹ್ ಮತ್ತು ಕೆ. ವಿನೋದ್ ಚಂದ್ರನ್ ಅವರಿದ್ದ ಪೀಠವು ಈ ತೀರ್ಪು ಪ್ರಕಟಿಸಿದೆ.

"ಸಿವಿಲ್ ನ್ಯಾಯಾಧೀಶರ (ಜೂನಿಯರ್ ವಿಭಾಗ) ಪರೀಕ್ಷೆಗೆ ಹಾಜರಾಗುವ ಯಾವುದೇ ಅಭ್ಯರ್ಥಿಯು ಕನಿಷ್ಠ ಮೂರು ವರ್ಷಗಳ ವಕೀಲಿಕೆ ಅನುಭವ ಹೊಂದಿರಬೇಕು ಎಂಬುವುದನ್ನು ಖಚಿತಪಡಿಸಿಕೊಳ್ಳಲು ಎಲ್ಲಾ ರಾಜ್ಯ ಸರ್ಕಾರಗಳು ನಿಯಮಗಳನ್ನು ತಿದ್ದುಪಡಿ ಮಾಡಬೇಕು. ಇದನ್ನು ಬಾರ್ ಕೌನ್ಸಿಲ್‌ನಲ್ಲಿ 10 ವರ್ಷಗಳ ಅನುಭವ ಹೊಂದಿರುವ ವಕೀಲರು ಪ್ರಮಾಣೀಕರಿಸಬೇಕು ಮತ್ತು ಅನುಮೋದಿಸಬೇಕು. ನ್ಯಾಯಾಧೀಶರಿಗೆ ಕಾನೂನು ಗುಮಾಸ್ತರಾಗಿ ಅನುಭವ ಹೊಂದಿರುವುದನ್ನೂ ಪರಿಗಣಿಸಲಾಗುತ್ತದೆ. ನ್ಯಾಯಾಧೀಶರಾಗಿ ಕೆಲಸ ಆರಂಭಿಸುವ ಮುನ್ನ ಒಂದು ವರ್ಷದ ತರಬೇತಿಯನ್ನೂ ಪಡೆಯಬೇಕು" ಎಂದು ಸುಪ್ರೀಂ ಕೋರ್ಟ್ ಆದೇಶಿಸಿದೆ.

**ಲಿಂಗಾಯತ ಪ್ರಗತಿಶೀಲ ಸಂಘದ ಶಿವಾನುಭವ ಕಾರ್ಯಕ್ರಮದಲ್ಲಿ ಡಾ. ತೋಂಟದ ಸಿದ್ಧರಾಮ ಶ್ರೀಗಳು**

# ತಾಯಿ ದೇವರಿಗಿಂತಲೂ ಶ್ರೇಷ್ಠ

■ವಿಜಯಸಾಕ್ಷಿ ಸುದ್ದಿ, ಗದಗ

ಜಗತ್ತಿನಲ್ಲಿ ತಾಯಿಗಿಂತ ಮಿಗಿಲಾದವರು ಯಾರೂ ಇಲ್ಲ. ತಾಯಿ ದೇವರಿಗಿಂತಲೂ ಶ್ರೇಷ್ಠ. ತಾಯಿಯೇ ದೇವರು ಎಂದು ಪೂಜ್ಯ ಶ್ರೀ ಜಗದ್ಗುರು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ನುಡಿದರು.

ಇಲ್ಲಿನ ಲಿಂಗಾಯತ ಪ್ರಗತಿಶೀಲ ಸಂಘದ 2745ನೇ ಶಿವಾನುಭವ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದ ಶ್ರೀಗಳು, ತಾಯಿಗೆ ಮಾತೃ ದೇವೋ ಭವ ಎನ್ನುತ್ತೇವೆ. ಹೀಗಾಗಿ ತಾಯಿಯನ್ನು ಪ್ರೀತಿ, ಗೌರವ, ಸಂತೋಷದಿಂದ ನೋಡಿಕೊಳ್ಳಬೇಕು. ತಾಯಿಯೆಂದರೆ ಭೂಮಿಯ ರೂಪ. ಆಕೆ ಭೂಮಿಯಷ್ಟೇ ಸಹನೆ, ತಾಳ್ಮೆ, ಕರುಣೆಯುಳ್ಳವಳು. ತಾಯಿಯ ಪ್ರೀತಿಯನ್ನು ಅಳೆಯಲು ಸಾಧ್ಯವಿಲ್ಲ. ತಾಯಿಯನ್ನು ಚೆನ್ನಾಗಿ ನೋಡಿಕೊಳ್ಳಬೇಕೆಂದು ಶ್ರೀಗಳು ತಿಳಿಸಿದರು.

ಮೃತ್ಯುಂಜಯ ಹಿರೇಮಠ ಹಾಗೂ ಗುರುನಾಥ್ ಸುತಾರ ವಚನ ಸಂಗೀತ ನಡೆಸಿದರು. ಧಾರ್ಮಿಕ ಗ್ರಂಥ ಪಠಣವನ್ನು ಮನೋಜ ವಾಯ್.ಸುಳ್ಳದ, ವಚನ ಚಿಂತನವನ್ನು ನಂದೀಶ್ ಬಿ.ಸುಳ್ಳದ ನಡೆಸಿಕೊಟ್ಟರು. ದಾಸೋಹ ಸೇವೆಯನ್ನು ತೋಂಟದಾರ್ಯ ವಿದ್ಯಾಪೀಠದ ಐಟಿಐ ಕಾಲೇಜಿನ ಸಿಬ್ಬಂದಿ ವರ್ಗ, ರೇವಣಸಿದ್ದಪ್ಪ ಪಟ್ಟಣಶೆಟ್ಟರ ಹಾಗೂ ಶೀಲಾ ಸುರೇಶ ಸಗರದ ಸಾ. ಸಿಂಧನೂರ ಇವರು ವಹಿಸಿಕೊಂಡಿದ್ದರು. ಐಟಿಐ ಕಾಲೇಜು ಪ್ರಾಚಾರ್ಯ ಶ್ರೀಧರ ಪಾಟೀಲ ಉಪಸ್ಥಿತರಿದ್ದರು.

ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಬಾಲಚಂದ್ರ ಭರಮಗೌಡ್ರ, ಉಪಾಧ್ಯಕ್ಷ ಡಾ. ಉಮೇಶ ಪುರದ, ವಿದ್ಯಾ ಪ್ರಭು ಗಂಜಿಹಾಳ, ಕಾರ್ಯದರ್ಶಿ ವೀರಣ್ಣ ಗೋಟಡಕಿ, ಸಹಕಾರ್ಯದರ್ಶಿ ಸೋಮನಾಥ ಪುರಾಣಿಕ, ನಾಗರಾಜ್ ಹಿರೇಮಠ, ಸಂಘಟನಾ ಕಾರ್ಯದರ್ಶಿ ಮಹೇಶ್ ಗಾಣಿಗೇರ, ಕೋಶಾಧ್ಯಕ್ಷ ಬಸವರಾಜ ಕಾಡಪ್ಪನವರ, ಶಿವಾನುಭವ ಸಮಿತಿಯ ಸಹ ಚೇರ್ಮನ್ ಶಿವಾನಂದ ಹೊಂಬಳ, ಶಿವಾನುಭವ ಸಮಿತಿಯ ಚೇರ್ಮನ್ ಐ.ಬಿ. ಬೆನಕೊಪ್ಪ ಹಾಗೂ ಭಕ್ತರು ಉಪಸ್ಥಿತರಿದ್ದರು. ಸೋಮನಾಥ ಪುರಾಣಿಕ ಸ್ವಾಗತಿಸಿದರು. ಡಾ. ಉಮೇಶ ಪುರದ ಕಾರ್ಯಕ್ರಮ ನಿರೂಪಿಸಿದರು.



ಶಿರಹಟ್ಟಿಯ ಎಫ್.ಎಂ. ಡಬಾಲಿ ಕಾಲೇಜಿನ ಉಪನ್ಯಾಸಕರಾದ ಸುಧಾ ಹುಚ್ಚಣ್ಣವರ 'ತಾಯಿ ಮತ್ತು ಸಂಸ್ಕೃತಿ' ವಿಷಯದ ಕುರಿತು ಮಾತನಾಡುತ್ತಾ, ಭಾರತ ವೈವಿಧ್ಯತೆಯಲ್ಲಿ ಸಂಸ್ಕಾರ ಕಂಡ ದೇಶ. ಇಲ್ಲಿ ಸಾಂಸ್ಕೃತಿಕ ಶ್ರೀಮಂತಿಕೆ ಇದೆ. ತಾಯಿ ಸಂಸ್ಕಾರದ ಪ್ರತೀಕ. ತಾಯಿಯ ಸಂಸ್ಕಾರದಿಂದ ಮಕ್ಕಳು ಒಳ್ಳೆಯವರಾಗುತ್ತಾರೆ. ಆಧುನಿಕ ಜಗತ್ತಿನಲ್ಲಿ ತಾಯಿಯ ಸಂಸ್ಕಾರ ಮುಖ್ಯ. ವೃದ್ಧಾಶ್ರಮಗಳು ನಶಿಸಿ ಮತ್ತೆ ಮಾತೃ ದೇವೋಭವ ಮೊಳಗಬೇಕಾಗಿದೆ. ಮದರ್ ತೆರೇಸಾ, ಸಾಲುಮರದ ತಿಮ್ಮಕ್ಕ ಮುಂತಾದ ಮಹಿಳೆಯರ ಆದರ್ಶಗಳ ಪಾಲನೆಯಾಗಬೇಕಾಗಿದೆ ಎಂದು ತಿಳಿಸಿದರು.

# ನಿಷ್ಠಾವಂತರನ್ನು ಅಧ್ಯಕ್ಷರನ್ನಾಗಿ ನೇಮಿಸಿ

**■ವಿಜಯಸಾಕ್ಷಿ ಸುದ್ದಿ, ಗದಗ**



ಗದಗ ಜಿಲ್ಲೆಯ ವಕ್ಫ್ ಬೋರ್ಡ್ ಚೇರಮನ್ ಜಿ.ಎಂ. ದಂಡಿನರ ಮರಣದ ನಂತರ ಖಾಲಿ ಉಳಿದಿರುವ ಅಧ್ಯಕ್ಷ ಸ್ಥಾನವನ್ನು ಧರ್ಮದ ಜ್ಞಾನವುಳ್ಳ, ಸ್ವಜನ ಪಕ್ಷಪಾತ ಮಾಡದ ಹಾಗೂ ಸಮಾಜದ ಬಡ ಮಕ್ಕಳ ಶೈಕ್ಷಣಿಕ ಹಾಗೂ ಅಭಿವೃದ್ಧಿಯ ಚಿಂತಕರಾಗಿರುವ, ವಕ್ಫ್ ಸಂಸ್ಥೆಯಲ್ಲಿ ನೋಂದಾಯಿತ ಯಾವುದೇ ಜಮಾತ, ಮಸ್ಜಿದ್, ದರ್ಗಾದ ಪದಾಧಿಕಾರಿಗಳನ್ನು ಹೊರತುಪಡಿಸಿ, ಒಳ್ಳೆಯ ವ್ಯಕ್ತಿತ್ವವುಳ್ಳ ವ್ಯಕ್ತಿಯನ್ನು ಅಧ್ಯಕ್ಷರನ್ನಾಗಿ ನೇಮಿಸುವಂತೆ ಜೆಡಿಎಸ್ ಪಕ್ಷದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಹಾಜಿಅಲಿ ಎಚ್. ಕೊಪ್ಪಳ ಪತ್ರಿಕಾ ಪ್ರಕಟಣೆಯ ಮೂಲಕ ರಾಜ್ಯ ಸರ್ಕಾರ ಮತ್ತು ಜಿಲ್ಲಾ ಉಸ್ತುವಾರಿ ಸಚಿವರಿಗೆ ಆಗ್ರಹಿಸಿದ್ದಾರೆ.

# ಆನ್‌ಲೈನ್ ಮೂಲಕ ಅರ್ಜಿ ಆಹ್ವಾನ

**■ವಿಜಯಸಾಕ್ಷಿ ಸುದ್ದಿ, ಗದಗ**

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳ (ಪಿ.ಯು.ಸಿ., ಐಟಿಐ ಮತ್ತು ಡಿಪ್ಲೋಮಾ ವಿದ್ಯಾರ್ಥಿಗಳಿಗೆ ಮಾತ್ರ) ಪ್ರವೇಶಕ್ಕೆ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಯನ್ನು HTTPS://SHP.KARNA-TAKA.GOV.IN/BCWD ಅನ್ನು ಸಂಪರ್ಕಿಸಿ ಆನ್‌ಲೈನ್‌ನಲ್ಲಿ ಸಲ್ಲಿಸಬೇಕು.

ತಾಲೂಕಾವಾರು ವಿದ್ಯಾರ್ಥಿನಿಲಯಗಳ ವಿವರ ಹಾಗೂ ವಿದ್ಯಾರ್ಥಿ ನಿಲಯದ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರದ ಆದೇಶಕ್ಕಾಗಿ ಇಲಾಖೆಯ ವೆಬ್‌ಸೈಟ್ https://bcwd.karnataka.gov.in ನ್ನು ನೋಡಬಹುದು. ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ bcwdhelpline @gmail.com ಇಮೇಲ್ ಮುಖಾಂತರ ಅಥವಾ ಜಿಲ್ಲಾ/ತಾಲೂಕು ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರನ್ನು ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.



ಕರ್ನಾಟಕ ರಾಜ್ಯ ಸರಕಾರಿ ನೌಕರ ಸಂಘವು ಶಿವಮೊಗ್ಗದಲ್ಲಿ ಏರ್ಪಡಿಸಿದ ರಾಜ್ಯಮಟ್ಟದ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಸಮಾರಂಭದಲ್ಲಿ ಗದಗ ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ತಾಲೂಕು ಅಧಿಕಾರಿ ಹಾಗೂ ಕರ್ನಾಟಕ ರಾಜ್ಯ ಸರಕಾರಿ ನೌಕರಕರ ಸಂಘದ ಗದಗ ಜಿಲ್ಲಾಧ್ಯಕ್ಷ ಡಾ. ಬಸವರಾಜ ಬಳ್ಳಾರಿ ನೇತೃತ್ವದಲ್ಲಿ ಸಂಘದ ಪದಾಧಿಕಾರಿಗಳು ಹಾಗೂ ಗದಗ ಜಿಲ್ಲೆಯ ಸರಕಾರಿ ನೌಕರ ಬಾಂಧವರು ಭಾಗವಹಿಸಿದ್ದರು.

### ಯೋಧರಲ್ಲಿ ನೈತಿಕ ಸ್ಥೈರ್ಯ ಹೆಚ್ಚಿಸಲು ಲಕ್ಷ್ಮೇಶ್ವರದಲ್ಲಿ ಬೃಹತ್ ತಿರಂಗಾ ಯಾತ್ರೆ

# ದೇಶ ಉಳಿದರಷ್ಟೇ ನಾವು ಬದುಕಬಹುದು

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಜಮ್ಮು-ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯ ವಿರುದ್ಧ ಭಾರತೀಯ ಯೋಧರು ನಡೆಸಿದ ಆಪರೇಷನ್ ಸಿಂಧೂರ ಕಾರ್ಯಾಚರಣೆ ಯಶಸ್ವಿಯಾದ ಹಿನ್ನೆಲೆಯಲ್ಲಿ ರಾಷ್ಟ್ರ ರಕ್ಷಣೆಗಾಗಿ ದೇಶ ಕಾಯುವ ಯೋಧರಲ್ಲಿ ನೈತಿಕ ಸ್ಥೈರ್ಯ ತುಂಬುವ ಉದ್ದೇಶದಿಂದ ಪಟ್ಟಣದಲ್ಲಿ ಬಿಜೆಪಿ ಕಾರ್ಯಕರ್ತರು, ಮಾಜಿ ಸೈನಿಕರು, ಎಬಿವಿಪಿ ಕಾರ್ಯಕರ್ತರು ಬೃಹತ್ ತಿರಂಗಾ ಯಾತ್ರೆ ನಡೆಸಿದರು.

ಇಲ್ಲಿನ ಸೋಮೇಶ್ವರ ದೇವಸ್ಥಾನದಿಂದ ಆರಂಭವಾದ ಯಾತ್ರೆಯು ಆದಯ್ಯ ಸರ್ಕಲ್, ಗದಗ ನಾಕಾ, ಹೊಸ ಬಸ್ ನಿಲ್ದಾಣ, ಶಿಗ್ಲಿ ಕ್ರಾಸ್, ಪುರಸಭೆ, ಸೋಮೇಶ್ವರ ಪಾದಗಟ್ಟಿ, ಪರ್ವತಮಲ್ಲಯ್ಯನ ದೇವಸ್ಥಾನ, ವಿದ್ಯಾರಣ್ಯ ಸರ್ಕಲ್, ಬಸ್ತಿಬಣ ಮೂಲಕ ಸಂಚರಿಸಿ ಮಹಾಕವಿ ಪಂಪ ವರ್ತುಲಕ್ಕೆ ಆಗಮಿಸಿತು. 'ದೇಶ ಸಂರಕ್ಷಣೆಗಾಗಿ ನಮ್ಮೆಲ್ಲರ ನಡೆ' ಎಂಬ ಧ್ಯೇಯ ವಾಕ್ಯದೊಂದಿಗೆ ಮಾಜಿ ಸೈನಿಕರು, ಯುವಕರು, ವಿದ್ಯಾರ್ಥಿಗಳು ನೂರು ಮೀಟರ್ ಉದ್ದದ ರಾಷ್ಟ್ರಧ್ವಜವನ್ನು ಹಿಡಿದುಕೊಂಡು ಯೋಧರಿಗೆ ಜಯಘೋಷ ಕೂಗಿದರು.



ಶಾಸಕ ಡಾ. ಚಂದ್ರು ಲಮಾಣಿ ಸಾರ್ವಜನಿಕರನ್ನು ಉದ್ದೇಶಿಸಿ ಮಾತನಾಡಿ, ನಮ್ಮ ಭಾರತೀಯ ಯೋಧರು ಪಾಕಿಸ್ತಾನದೊಳಗೆ ನುಗ್ಗಿ ಉಗ್ರರನ್ನು ಸದೆಬಡಿದಿದ್ದಾರೆ. ಪಹಲ್ಗಾಮ್‌ನಲ್ಲಿ ಭಯೋತ್ಪಾದಕರ ದಾಳಿಯಿಂದ ನಡೆದ ಹತ್ಯೆಗೆ ಪ್ರತೀಕಾರವಾಗಿ ಆಪರೇಷನ್ ಸಿಂಧೂರದ ಮೂಲಕ ಉಗ್ರರ ಹುಟ್ಟಡಗಿಸುವದರೊಂದಿಗೆ ಮಹಿಳೆಯರು, ಮಕ್ಕಳು ಸೇರಿ ಪ್ರತಿಯೊಬ್ಬ ಭಾರತೀಯರಲ್ಲಿ ಆತ್ಮಸ್ಥೈರ್ಯ, ನೆಮ್ಮದಿ, ರಕ್ಷಣೆ-ಯ ಭಾವನೆ ಮೂಡಿಸಿದ ಕೇಂದ್ರ ಸರ್ಕಾರ ಮತ್ತು ಭಾರತದ ಸೈನಿಕರ ದಿಟ್ಟ ನಿರ್ಧಾರ ಅಭಿನಂದನೀಯ ಎಂದರು.

ಪುರಸಭೆ ಸದಸ್ಯೆ ಅಶ್ವಿನಿ ಅಂಕಲಕೋಟಿ ಹಾಗೂ

ನಮ್ಮ ಯೋಧರ ಶೌರ್ಯ, ಸಾಹಸವನ್ನು ಮೆಚ್ಚಿ ಅವರಲ್ಲಿ ನೈತಿಕ ಸ್ಥೈರ್ಯ ತುಂಬುವುದು ಎಲ್ಲ ಭಾರತೀಯರ ಕರ್ತವ್ಯ. ಆದರೆ ದೇಶದೊಳಗಿನ ಕೆಲ ದುಷ್ಟರು ಪಾಕಿಸ್ತಾನದ ಪರವಾಗಿ ಮಾತನಾಡುತ್ತಿರುವುದು ಖಂಡನೀಯ. ಮೊದಲು ನಮ್ಮ ದೇಶದ ಬಗ್ಗೆ ಎಲ್ಲರೂ ಅಭಿಮಾನ ಬೆಳೆಸಿಕೊಳ್ಳಬೇಕು. ದೇಶ ಉಳಿದರೆ ಮಾತ್ರ ನಾವು ಬದುಕಿರಲು ಸಾಧ್ಯ ಎಂಬುದನ್ನು ನಾವು ಅರಿತುಕೊಳ್ಳಬೇಕು. ಯಾರೂ ಸೈನಿಕರ ಧೈರ್ಯವನ್ನು ಕುಗ್ಗಿಸುವ ಸಾಹಸ ಮಾಡಬಾರದು ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಮಾಜಿ ಸೈನಿಕರ ಸಂಘದ ಅಧ್ಯಕ್ಷ ಹಿರೇಮಠ, ಸುನೀಲ ಮಹಾಂತಶೆಟ್ಟರ ಮಾತನಾಡಿದರು. ಈ ಸಂದರ್ಭದಲ್ಲಿ ನಿಂಗಪ್ಪ ಬನ್ನಿ, ಗಂಗಾಧರ ಮೆಣಸಿನಕಾಯಿ, ಮಾರುತಿ ಬಟ್ಟೂರ, ಮಹಾದೇವಪ್ಪ ಅಣ್ಣಿಗೇರಿ, ಬಸಣ್ಣ ಹಂಜಿ, ಅನಿಲ ಮುಳಗುಂದ, ಬಸವರಾಜ ಕಲ್ಲೂರ, ಮುದಕಣ್ಣ ಗಾಡದ, ಬಸವರಾಜ ಚಕ್ರಸಾಲಿ, ಪರಶುರಾಮ ಇಮ್ಮಡಿ, ಜಗದೀಶಗೌಡ ಪಾಟೀಲ, ಕರೆಣ್ಣವರ, ಜಾನು ಲಮಾಣಿ, ಶಕ್ತಿ ಕತ್ತಿ, ಕಲ್ಲಪ್ಪ



ಹಡಪದ ಸೇರಿದಂತೆ ಮತ್ತಿತರರು ಇದ್ದರು.

# ರಾಜ್ಯದ ಜನತೆಯೇ ನಮ್ಮ ಮಾಲೀಕರು

▶▶ಮೊದಲನೇ ಪುಟದಿಂದ

ಹಣಕಾಸು ಯೋಜನೆಯಲ್ಲಿ ರಾಜ್ಯಕ್ಕೆ ಕೇಂದ್ರ ಮಾಡಿರುವ ಅನ್ಯಾಯ ನಿಮಗೆಲ್ಲಾ ತಿಳಿದಿದೆ. ಭದ್ರಾ ಮೇಲ್ದಂಡೆ ಯೋಜನೆಗೆ ಘೋಷಿಸಿದ್ದ 5300 ಕೋಟಿ ಹಣದಲ್ಲಿ ಬಿಡಿಗಾಸನ್ನೂ ಬಿಡುಗಡೆ ಮಾಡಲಿಲ್ಲ. ಭದ್ರಾ ಮೇಲ್ದಂಡೆ ಯೋಜನೆಯನ್ನು ರಾಷ್ಟ್ರೀಯ ಯೋಜನೆ ಎಂದು ಘೋಷಿಸುವುದಾಗಿ ಭರವಸೆ ನೀಡಿದರು. ಇದನ್ನೂ ಈಡೇರಿಸಲಿಲ್ಲ ಎಂದು ಟೀಕಿಸಿದರು. ಹಿಂದಿನ ಬಿಜೆಪಿ ಸರ್ಕಾರದ ಮೇಲೆ ಶೇ.40 ಕಮಿಷನ್ ಆರೋಪ ಇತ್ತು. ನಾವು ಇದರ ವಿರುದ್ಧ ಹೋರಾಟ ಮಾಡಿದೆವು. ಅಧಿಕಾರಕ್ಕೆ ಬಂದ ಬಳಿಕ ತನಿಖೆಗೆ ನಾಗಮೋಹನ್ ದಾಸ್ ಸಮಿತಿ ರಚಿಸಿದೆವು. ಸಮಿತಿ ಕೊಟ್ಟಿರುವ ವರದಿಯಲ್ಲಿ ಕಮಿಷನ್ ವ್ಯವಹಾರ ಸಾಬೀತಾಗಿದೆ ಎಂದರು.

1.22 ಕೋಟಿ ಕುಟುಂಬಗಳ ಯಜಮಾನಿಯರಿಗೆ ಗೃಹಲಕ್ಷ್ಮೀ ಯೋಜನೆಯಡಿ 2000 ರೂಪಾಯಿ ಕೊಡುತ್ತಿದ್ದೇವೆ. 1.30 ಕೋಟಿ ಕುಟುಂಬಗಳಿಗೆ ಗೃಹಜ್ಯೋತಿ ಯೋಜನೆಯಡಿ ಅನುಕೂಲ ಒದಗಿಸಿದ್ದೇವೆ. ಜೊತೆಗೆ ಇಡೀ ರಾಜ್ಯದ ಮಹಿಳೆಯರಿಗೆ ಶಕ್ತಿ ಯೋಜನೆಯಡಿ ಉಚಿತ ಪ್ರಯಾಣದ ವ್ಯವಸ್ಥೆ ಮಾಡಿದ್ದೇವೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದರು.

# ಮನೆ ಕಟ್ಟಬೇಕಾದರೆ ಬೇಸ್‌ಮೆಂಟ್ ಮಾಡಬಾರದು: ಹೊಸ ಕಾನೂನು ಬಗ್ಗೆ ಮಾತನಾಡಿದ DCM ಡಿಕೆಶಿ!

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಇನ್ಮುಂದೆ ಮನೆ ಕಟ್ಟಬೇಕಾದರೆ ಬೇಸ್ಮೆಂಟ್ ಮಾಡಬಾರದು. ಬೇಸ್ಮೆಂಟ್ ಬಗ್ಗೆ ಹೊಸ ಕಾನೂನು ತರುತ್ತೇವೆ ಎಂದು ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಹೇಳಿದ್ದಾರೆ.

ನಗರದ ಬಿಟಿಎಂ ಲೇಔಟ್ ಮಧುವನ ಅಪಾರ್ಟ್ಮೆಂಟ್‌ನಲ್ಲಿ ತುಂಬಿದ್ದ ಮಳೆ ನೀರು ಹೊರಹಾಕುವ ವೇಳೆ ವಿದ್ಯುತ್ ಶಾಕ್ ನಿಂದ ಇಬ್ಬರು ಸಾವನ್ನಪ್ಪಿದ್ದು, ಮೃತರ ಕುಟುಂಬಕ್ಕೆ ಬೆಂಗಳೂರು ಉಸ್ತುವಾರಿ ಸಚಿವ ಡಿಕೆ ಶಿವಕುಮಾರ್ ಸಾಂತ್ವನ ಹೇಳಿದ್ದಾರೆ.

ಇದೇ ವೇಳೆ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿದ ಡಿಕೆ ಶಿವಕುಮಾರ್, ಬೆಂಗಳೂರಿನ ಹಲವೆಡೆ ಕೆರೆಯ ಅಕ್ಕಪಕ್ಕದಲ್ಲಿ ಮನೆ ಕಟ್ಟಿದ್ದಾರೆ. ಕೆರೆ ಪಕ್ಕದಲ್ಲಿ ಮನೆ ನಿರ್ಮಿಸಿರುವುದರಿಂದ ಸಮಸ್ಯೆಯಾಗುತ್ತಿದೆ. ಮುಂದೆ ಇಂತಹ ಘಟನೆ ಆಗದಂತೆ ಹೊಸ ಕಾನೂನು ತರುತ್ತೇವೆ. ಇನ್ಮುಂದೆ ಮನೆ ಕಟ್ಟಬೇಕಾದರೆ ಬೇಸ್ಮೆಂಟ್ ಮಾಡಬಾರದು.

# ಉಚಿತ ಮೋತಿ ಬಿಂದು ಶಸ್ತ್ರ ಚಿಕಿತ್ಸೆ



**■ವಿಜಯಸಾಕ್ಷಿ ಸುದ್ದಿ, ಹುಲಕೋಟಿ**

ಇಲ್ಲಿನ ಕೆ.ಎಚ್. ಪಾಟೀಲ ಆಸ್ಪತ್ರೆ ಹಾಗೂ ಸಂಶೋಧನಾ ಸಂಸ್ಥೆ ಹಾಗೂ ಹುಬ್ಬಳ್ಳಿಯ ಎಂ.ಎಂ. ಜೋಶಿ ಕಣ್ಣಿನ ಆಸ್ಪತ್ರೆಯ ಸಹಯೋಗ ಹಾಗೂ ಗದಗ ಜಿಲ್ಲಾ ಅಂಧತ್ವ ನಿಯಂತ್ರಣ ಸಂಸ್ಥೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಗದಗ ಇವರ ಸಹಕಾರದಲ್ಲಿ ಎಚ್.ಕೆ ಪಾಟೀಲ ಸೇವಾ ತಂಡದಿಂದ ಸೋಮವಾರದಂದು ಒಟ್ಟು 16 ಜನ ಫಲಾನುಭವಿಗಳಿಗೆ ಉಚಿತವಾಗಿ ಕಣ್ಣಿನ ಪೊರೆಯ ಶಸ್ತ್ರ (ಮೋತಿ ಬಿಂದು) ಚಿಕಿತ್ಸೆಯನ್ನು ಹುಲಕೋಟಿಯ ಕೆ.ಎಚ್. ಪಾಟೀಲ ಆಸ್ಪತ್ರೆಯಲ್ಲಿ ನೆರವೇರಿಸಲಾಯಿತು.

ಸಂಸ್ಥೆಯ ಚೇರಮನ್ ಡಾ. ಎಸ್.ಆರ್. ನಾಗನೂರ ಹಾಗೂ ಗೌರವ ಕಾರ್ಯದರ್ಶಿ ಡಾ. ವೇಮನ್ ಆರ್.ಸಾವಕಾರ ಶಿಬಿರದಲ್ಲಿ ಉಪಸ್ಥಿತರಿದ್ದು ಮಾರ್ಗದರ್ಶನ ಮಾಡಿದರು. ಕಣ್ಣಿನ ಪೊರೆಯ ಶಸ್ತ್ರಚಿಕಿತ್ಸೆಯನ್ನು ಎಂ.ಎಂ. ಜೋಶಿ ಆಸ್ಪತ್ರೆಯ ವೈದ್ಯರಿಂದ ನಡೆಸಲಾಯಿತು. ಇದಕ್ಕೂ ಮೊದಲು ಫಲಾನುಭವಿಗಳಿಗೆ ಉಚಿತವಾಗಿ ಬಿಪಿ, ಶುಗರ್, ರಕ್ತ ತಪಾಸಣೆ ಮಾಡಲಾಯಿತು.

ಶಿಬಿರದಲ್ಲಿ ಕೆ.ಎಚ್. ಪಾಟೀಲ ಆಸ್ಪತ್ರೆಯ ಸಿಬ್ಬಂದಿ ಪಾಲ್ಗೊಂಡು ಸಹಾಯ ಸಹಕಾರ ನೀಡಿದರು.

# ಸಿಡಿಲು ಬಡಿದು ಯುವಕ ದುರ್ಮರಣ!

**■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ**

ಅಕ್ಕನ ಮನೆಗೆ ಬಂದು ಆಕಳ ಮೈ ತೊಳೆಯಲು ಕೆರೆಗೆ ಹೋದ ಸಮಯದಲ್ಲಿ ಸಿಡಿಲು ಬಡಿದು ಯುವಕನೋರ್ವ ಸಾವಿಗೀಡಾಗಿರುವ ಘಟನೆ ಹುಬ್ಬಳ್ಳಿ ಸಮೀಪದ ಕುಂದಗೋಳ ತಾಲೂಕಿನ ಹಿರೇನರ್ತಿ ಗ್ರಾಮದಲ್ಲಿ ಸಂಭವಿಸಿದೆ.

ಮೈಲಾರಪ್ಪ ಬಸಪ್ಪ ಉಣಕಲ್ ಎಂಬಾತನೇ ಸಾವಿಗೀಡಾದ ದುರ್ದೈವಿ ಆಗಿದ್ದು, ಮೂಲತಃ ಹಿರೇಹರಕುಣಿ ಗ್ರಾಮದವನೆಂದು ಗೊತ್ತಾಗಿದೆ. ಘಟನೆಯ ಬಗ್ಗೆ ಮಾಹಿತಿ ಸಿಗುತ್ತಿದ್ದ ಹಾಗೇ ಪೊಲೀಸರು ಸ್ಥಳಕ್ಕೆ ಧಾವಿಸಿ, ಪರಿಶೀಲನೆ ನಡೆಸಿದರು.

### ಸ್ಲಂ ಸಮಾವೇಶ, ಸ್ಲಂ ಹಬ್ಬದ ಪೋಸ್ಟರ್ ಬಿಡುಗಡೆ ಮಾಡಿದ ಅಶೋಕ ಕುಡತಿನ್ನಿ

# ಸಾಮಾಜಿಕ ನ್ಯಾಯಕ್ಕಾಗಿ 'ಸ್ಲಂ ಜನರ ಸಮಾವೇಶ'

**■ವಿಜಯಸಾಕ್ಷಿ ಸುದ್ದಿ, ಗದಗ**

ಬಾಬಾಸಾಹೇಬ ಅಂಬೇಡ್ಕರ್ ಅವರ ಸಮಾನತೆ ಮತ್ತು ಸಾಮಾಜಿಕ ನ್ಯಾಯದ ಹೋರಾಟದ ಫಲವಾಗಿ ನಮ್ಮ ದೇಶದಲ್ಲಿ ಸರ್ಕಾರದ ಯೋಜನೆಗಳನ್ನು ಸಮಾನವಾಗಿ ಹಂಚಿಕೆ ಮಾಡಲಾಗುತ್ತಿದೆ. ಶ್ರೀಮಂತರು ಹಾಗೂ ಬಡವರ ನಡುವೆ ಇರುವ ಅಂತರವನ್ನು ಶಮನಗೊಳಿಸುವ ಐತಿಹಾಸಿಕ ಹೋರಾಟದಿಂದ ಇಂದು ಎಲ್ಲರೂ ಜಾತಿ, ಧರ್ಮಗಳನ್ನು ಮೀರಿ ಒಂದಾಗಿ ಬದುಕು ನಡೆಸುತ್ತಿರುವುದು ನಮ್ಮ ದೇಶದ ಸಂವಿಧಾನದಿಂದ ಸಾಧ್ಯವಾಗಿದೆ. ಇದನ್ನು ಗಮನದಲ್ಲಿ ಇಟ್ಟುಕೊಂಡು ನಾವು ಎಲ್ಲರೂ ಸೇರಿ ಸಮಾನತೆ ಹಾಗೂ ಸಾಮಾಜಿಕ ನ್ಯಾಯಕ್ಕಾಗಿ ಒಗ್ಗೂಡಲು ಸ್ಲಂ ಜನರ ಸಮಾವೇಶ ಹಮ್ಮಿಕೊಂಡಿದ್ದು, ಎಲ್ಲರೂ ಭಾಗವಹಿಸಬೇಕೆಂದು ಗದಗ ಜಿಲ್ಲಾ ಸ್ಲಂ ಸಮಿತಿ ಉಪಾಧ್ಯಕ್ಷ ಅಶೋಕ ಕುಡತಿನ್ನಿ ಹೇಳಿದರು.



ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ ಆರ್.ಮಾನ್ವಿ ಮಾತನಾಡಿ, ಸ್ಲಂ ಜನರ ಸಮಾವೇಶದ ಜೊತೆಗೆ ವಿಭಾಗ ಮಟ್ಟದ ಸ್ಲಂ ಹಬ್ಬ ಕಾರ್ಯಕ್ರಮವನ್ನು ನಡೆಸಲಾಗುತ್ತಿದ್ದು, ನಮ್ಮ ಕೊಳಗೇರಿಗಳಲ್ಲಿ ಇರುವ ಕಲಾವಿದರನ್ನು ಮತ್ತು ಪ್ರತಿಭೆಗಳನ್ನು ಹೊರಜಗತ್ತಿಗೆ ಪರಿಚಯಿಸುವ ಕೆಲಸವನ್ನು ಈ ಸಮಾವೇಶದ ಮೂಲಕ ಮಾಡಲಾಗುತ್ತಿದೆ. ನಮ್ಮ ಸ್ಲಂ ಪ್ರದೇಶಗಳಲ್ಲಿರುವ ಕಲಾವಿದರು ಇದರ ಸದಪಯೋಗ ಪಡೆದುಕೊಳ್ಳಬೇಕೆಂದು ಹೇಳಿದರು.

ಅವರು ನಗರದ ಪ್ರವಾಸಿ ಮಂದಿರದಲ್ಲಿ, ಮೇ 28ರಂದು ನಗರದಲ್ಲಿ ಹಮ್ಮಿಕೊಂಡಿರುವ ಸ್ಲಂ ಜನರ ಸಮಾವೇಶ ಹಾಗೂ ಸ್ಲಂ ಹಬ್ಬ ಕಾರ್ಯಕ್ರಮದ ಪೋಸ್ಟರ್ ಬಿಡುಗಡೆ ಮಾಡಿ ಮಾತನಾಡಿ, ಭಾರತದ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ದೇಶದ ಪ್ರತಿಯೊಬ್ಬ ನಾಗರೀಕರು ಸಮಾನವಾಗಿ ಹಕ್ಕು ಪಡೆಯುವಂತೆ ನಮ್ಮ ಸಂವಿಧಾನ ಖಾತ್ರಿಪಡಿಸಿದೆ. ಇದನ್ನು ನಮ್ಮ ಸ್ಲಂಗಳಲ್ಲಿರುವ ಜನರು ತಿಳಿದುಕೊಂಡು ಜಾತಿ, ಧರ್ಮ ಮಾಡದೇ ಒಗ್ಗೂಡಿ ಹೋರಾಟಗಳನ್ನು ಮಾಡಿದರೆ ಮಾತ್ರ ನಮ್ಮ ಮೂಲಭೂತ ಹಕ್ಕುಗಳನ್ನು ಪಡೆದುಕೊಳ್ಳಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಸಾವಿತ್ರಿಬಾ ಫುಲೆ ಮಹಿಳಾ ಸಮಿತಿ ಹುಬ್ಬಳ್ಳಿ ಘಟಕದ ಸಂಚಾಲಕಿ ಶೋಭಾ ಕಮತರ, ಸ್ಲಂ ಸಮಿತಿ ಕಾರ್ಯದರ್ಶಿ ಅಶೋಕ ಕುಸಬಿ, ಮಹಿಳಾ ಸಮಿತಿ ಸಂಚಾಲಕಿ ಪರವೀನಬಾನು ಹವಾಲ್ದಾರ, ಇಬ್ರಾಹಿಂ ಮುಲ್ಲಾ, ಶರಣಪ್ಪ ಸೂಡಿ, ಮೆಹರುನಿಸಾ ಡಂಬಳ, ಮುನ್ನಾ ಅಗಡಿ, ಪುಷ್ಪಾ ಬಿಜಾಪೂರ, ಮಕ್ತುಮಸಾಬ ಮುಲ್ಲಾನವರ, ಮಹಮ್ಮದಸಾಬ ಗಡಾದ, ಮೌಲಸಾಬ ಗಚ್ಚಿ, ಮೆಹಬೂಬಸಾಬ ಬಳ್ಳಾರಿ, ರೇಷ್ಮಾ ಢಾಲಾಯತ, ಸಾಕ್ರುಬಾಯಿ ಗೋಸಾವಿ ಹಾಗೂ ನೂರಾರು ಸ್ಲಂ ನಿವಾಸಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಪರೀಕ್ಷಾ ಕೇಂದ್ರಗಳ ಸುತ್ತ ಪ್ರತಿಬಂಧಕಾಜ್ಞೆ

**■ವಿಜಯಸಾಕ್ಷಿ ಸುದ್ದಿ, ಗದಗ**


ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿಯ 2025ರ ಎಸ್‌ಎಸ್‌ಎಲ್‌ಸಿ ಪರೀಕ್ಷೆಗಳು-2 ಪರೀಕ್ಷೆಗಳನ್ನು ಮೇ 26ರಿಂದ ಜೂನ್ 2ರವರೆಗೆ ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 1.45ರವರೆಗೆ ನಡೆಸಲಿದೆ. ಪರೀಕ್ಷಾ ಸಮಯದಲ್ಲಿ ನಕಲು ಮಾಡುವುದು, ಪರೀಕ್ಷಾರ್ಥಿಗಳ ಬದಲು ಬೇರೆಯವರು ಪರೀಕ್ಷೆಗೆ ಹಾಜರಾಗುವುದು ಮುಂತಾದ ಅವ್ಯವಹಾರ ತಡೆಗಟ್ಟಲು ಮತ್ತು ಪರೀಕ್ಷಾ ಕೇಂದ್ರಗಳಲ್ಲಿ ಶಿಸ್ತು ಮತ್ತು ಶಾಂತಿ ಕಾಪಾಡುವ ಹಿತದೃಷ್ಟಿಯಿಂದ ಜಿಲ್ಲೆಯ 20 ಪರೀಕ್ಷಾ ಕೇಂದ್ರದ ಸುತ್ತಲಿನ 200 ಮೀಟರ್ ಪ್ರದೇಶವನ್ನು ನಿಷೇಧಿತ ಪ್ರದೇಶವೆಂದು ಘೋಷಿಸಿ ಪ್ರತಿಬಂಧಕಾಜ್ಞೆ ಜಾರಿಗೊಳಿಸಲಾಗಿದೆ. ಪರೀಕ್ಷಾ ಕೇಂದ್ರಗಳ 200 ಮೀಟರ್ ಪರಿಮಿತಿಯೊಳಗೆ ಮೇ 26ರಿಂದ ಜೂನ್ 2ರವರಗೆ ಬೆಳಿಗ್ಗೆ 9.30 ಗಂಟೆಯಿಂದ ಮಧ್ಯಾಹ್ನ 2.30 ಗಂಟೆಯವರೆಗೆ ಪ್ರತಿಬಂಧಕಾಜ್ಞೆ ಜಾರಿಗೊಳಿಸಲಾಗಿದೆ.

ಪರೀಕ್ಷಾರ್ಥಿಗಳು ಹಾಗೂ ಪರೀಕ್ಷೆಯಲ್ಲಿ ಕಾರ್ಯನಿರ್ವಹಿಸುವ ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ಹೊರತುಪಡಿಸಿ ಇತರ ಯಾವುದೇ ವ್ಯಕ್ತಿ ಅಥವಾ ಐದು ಐದಕ್ಕಿಂತ ಹೆಚ್ಚು ಜನರು ಗುಂಪು ಕೂಡುವುದು, ಅಥವಾ ವ್ಯಕ್ತಿಗಳ ಗುಂಪುಗಳ ಪ್ರವೇಶವನ್ನು ನಿರ್ಬಂಧಿಸಲಾಗಿದೆ. ಈ ಪ್ರದೇಶ ವ್ಯಾಪ್ತಿಯಲ್ಲಿ ಬರುವ ಝೆರಾಕ್ಸ್ ಅಂಗಡಿ, ಬುಕ್ ಸ್ಟಾಲ್, ಫೋಟೋ ಕಾಪಿಯರ್‌ಗಳನ್ನು ಬಂದ್ ಮಾಡಲು ಆದೇಶಿಸಿದೆ. ಪರೀಕ್ಷಾ ಕೇಂದ್ರಗಳಲ್ಲಿ ಮೊಬೈಲ್ ಫೋನ್ ಮತ್ತು ಇತರೇ ಸಂಪರ್ಕ ಸಲಕರಣೆಗಳನ್ನು ತರುವುದನ್ನು ನಿಷೇಧಿಸಲಾಗಿದೆ.

ಪರೀಕ್ಷಾ ದಿನಗಳಂದು ಪರೀಕ್ಷಾ ಕೇಂದ್ರಗಳಿಗೆ ವಿದ್ಯಾರ್ಥಿಗಳು ಆಗಮಿಸುವ ಸಮಯ ಮತ್ತು ಹೊರಹೋಗುವ ಸಮಯದಲ್ಲಿ ಮಾತ್ರ ಚಿತ್ರೀಕರಿಸಲು ಮಾಧ್ಯಮದವರಿಗೆ ಅವಕಾಶವಿದ್ದು, ಪರೀಕ್ಷಾ ಗೌಪ್ಯತೆಯ ದೃಷ್ಟಿಯಿಂದ ಪರೀಕ್ಷಾ ಕೊಠಡಿಗಳಲ್ಲಿ ಪ್ರವೇಶ, ಚಿತ್ರೀಕರಣ ಇತ್ಯಾದಿಗಳನ್ನು ಸಂಪೂರ್ಣವಾಗಿ ನಿಷೇಧಿಸಿದೆ ಎಂದು ಜಿಲ್ಲಾಧಿಕಾರಿ ಮತ್ತು ಜಿಲ್ಲಾ ದಂಡಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಿಧನ

**ವಸಂತರಾವ್ ನಾಂದೋಡಕರ**



**ಧಾರವಾಡ:** ಟಿವಿ-9 ಸುದ್ದಿ ವಾಹಿನಿಯ ಮುಖ್ಯ ಕಾರ್ಯ ನಿರ್ವಾಹಕ ನಿರ್ಮಾಪಕ ಡಾ. ವಿಲಾಸ ವಸಂತರಾವ್ ನಾಂದೋಡಕರ ಅವರ ತಂದೆ ವಸಂತರಾವ್ ನಾಂದೋಡಕರ (76) ಮಂಗಳವಾರ ಬೆಳಗಿನ ಜಾವ ಅನಾರೋಗ್ಯದ ಕಾರಣ ನಿಧನರಾದರು.

ಧಾರವಾಡದ ಸಂಪಿಗೆ ನಗರ ಹತ್ತಿರ ಇರುವ ಸಿದ್ಧಗಂಗಾ ನಗರದ ನಿವಾಸಿ ವಸಂತರಾವ್ ನಾಂದೋಡಕರ ಅವರು ಪೊಲೀಸ್ ಮುಖ್ಯ ಪೇದೆಯಾಗಿ ನಿವೃತ್ತರಾಗಿದ್ದರು. ಮೃತರಿಗೆ ಮೂವರು ಗಂಡು ಮಕ್ಕಳು, ಪತ್ನಿ ಸೇರಿದಂತೆ ಅಪಾರ ಬಂಧು, ಮಿತ್ರರು ಇದ್ದಾರೆ.

# ಸಾಹಿತ್ಯಾಭಿರುಚಿಯಿಂದ ಸರ್ವಾಂಗೀಣ ವಿಕಾಸ

**■ವಿಜಯಸಾಕ್ಷಿ ಸುದ್ದಿ, ಗದಗ**

ಇಂದಿನ ಶಾಲಾ ಶಿಕ್ಷಣದಲ್ಲಿ ಸೃಜನಶೀಲ ಅಭಿವ್ಯಕ್ತಿಯ ಅವಕಾಶಗಳು ಕಡಿಮೆ ಇರುವದರಿಂದ ಸಾಹಿತ್ಯ ಸೃಷ್ಟಿ ವಿದ್ಯಾರ್ಥಿಗಳಲ್ಲಿ ಸಾಧ್ಯವಾಗುತ್ತಿಲ್ಲ. ಮಕ್ಕಳು ಮೂಲತಃ ಸೃಜನಶೀಲರಾಗಿದ್ದು, ಸೂಕ್ತ ಅವಕಾಶಗಳನ್ನು ಕಲ್ಪಿಸುವ ಮೂಲಕ ಸುತ್ತಲಿನ ಸಂಗತಿಗಳನ್ನು ಲಿಖಿತವಾಗಿ ಹಾಗೂ ಮೌಖಿಕವಾಗಿ ವ್ಯಕ್ತಪಡಿಸುವ ಸನ್ನಿವೇಶಗಳನ್ನು ಕಮ್ಮಟದಿಂದ ಸೃಷ್ಟಿಸಲಾಗಿದೆ ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ವಿವೇಕಾನಂದಗೌಡ ಪಾಟೀಲ ತಿಳಿಸಿದರು.




ಅವರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಷ್ಠಾನದ ಸಹಯೋಗದಲ್ಲಿ ಜರುಗಿದ ಎರಡು ದಿನಗಳ ಕತೆ ಹಾಗೂ ಕಾವ್ಯ ರಚನಾ ಕಮ್ಮಟದ ಸಮಾರೋಪ ಸಮಾರಂಭದ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದರು.

ಚರ್ಚೆ, ಸಂವಾದಗಳ ಮೂಲಕ ಪರಸ್ಪರ ಅನುಭವಗಳನ್ನು ಹಂಚಿಕೊಂಡು ಕತೆ ಮತ್ತು ಕವಿತೆಗಳನ್ನು ರಚಿಸಿದ ಪರಿಯನ್ನು ಗಮನಿಸಿದರೆ ಕಮ್ಮಟ ಯಶಸ್ವಿಯಾಗಿದೆ ಎಂಬುದು ವೇದ್ಯವಾಗುತ್ತದೆ ಎಂದು ತಿಳಿಸಿದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನದ ಕಾರ್ಯದರ್ಶಿಗಳಾದ ಸುಭಾಸಚಂದ್ರ ಬೆಟದೂರ ಕಮ್ಮಟದಲ್ಲಿ ವಿದ್ಯಾರ್ಥಿಗಳು ರಚಿಸಿದ ಕವಿತೆಗಳ ಕರಡು ಸಂಕಲನ 'ಮಿಂಚು', ಕಥೆಗಳ ಕರಡು ಸಂಕಲನ 'ನವಿಲುಗರಿ' ಪುಸ್ತಕಗಳನ್ನು ಬಿಡುಗಡೆಗೊಳಿಸಿ ಮಾತನಾಡಿ, ಪಠ್ಯ-ಪುಸ್ತಕಗಳಲ್ಲಿಯೇ ಮುಳುಗಿರುವ ವಿದ್ಯಾರ್ಥಿಗಳಿಗೆ ಇಂತಹ ಕಮ್ಮಟಗಳಿಂದ ಮನೋವಿಕಾಸವಾಗಿ ಹೊಸ ಚಿಂತನೆಗಳಿಗೆ ದಾರಿ ಮಾಡಿಕೊಡುತ್ತವೆ. ಪ್ರತಿಭಾ ಸಂಪನ್ನರಾದ ಮಕ್ಕಳಿಗೆ ವೈವಿಧ್ಯಮಯ ಅವಕಾಶಗಳನ್ನು ಕಲ್ಪಿಸಿ ಅವರ ಬದುಕನ್ನು ಸುಂದರಗೊಳಿಸುವ ಜವಾಬ್ದಾರಿ ನಮ್ಮೆಲ್ಲರದ್ದಾಗಿದೆ ಎಂದು ತಿಳಿಸಿದರು.

ಕಮ್ಮಟದಲ್ಲಿ ಮಕ್ಕಳ ಬರವಣಿಗೆ ಪ್ರಗತಿ ಮತ್ತು ಸಾಧನೆ ಕುರಿತು ಸಂಪನ್ಮೂಲ ವ್ಯಕ್ತಿಗಳಾದ ಬಸವರಾಜ ನೆಲಜೇರಿ, ಭುವನೇಶ್ವರಿ ಅಂಗಡಿ, ಮಂಜುಳಾ ತುಮ್ಮರಮಟ್ಟಿ, ವಿನಾಯಕ ಕಮತದ ಮಾತನಾಡಿದರು.

ಹರ್ಷಿತಾ ಉಮಚಗಿ ಪ್ರಾರ್ಥಿಸಿದರು. ಡಿ.ಎಸ್. ಬಾಪುರಿ ಸ್ವಾಗತಿಸಿದರು. ಸತೀಶ ಚನ್ನಪ್ಪಗೌಡ ವಂದಿಸಿದರು. ಕಮ್ಮಟದಲ್ಲಿ 70ಕ್ಕೂ ಅಧಿಕ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಆಕ್ಷೇಪಣೆ ಸಲ್ಲಿಕೆಗೆ ಮೇ.23 ಕೊನೆಯ ದಿನ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ 15ನೇ ಹಣಕಾಸು ಆಯೋಗದಡಿಯಲ್ಲಿ ಗುತ್ತಿಗೆ ಆಧಾರದ ಮೇಲೆ ಖಾಲಿ ಇರುವ ಬ್ಲಾಕ್ ಮಟ್ಟದ ಸಾರ್ವಜನಿಕ ಆರೋಗ್ಯ ಘಟಕದ ಬ್ಲಾಕ್ ಎಪಿಡೆಮಿಯೋಲಾಜಿಸ್ಟ್ ಹುದ್ದೆಗೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಪಂಚಾಯತ್, ಗದಗ ಹಾಗೂ ಅಧ್ಯಕ್ಷರು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ, ಗದಗ ಇವರ ಅನುಮೋದನೆ ಮೇರೆಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿತ್ತು.

ಸ್ವೀಕೃತವಾದ ಅರ್ಜಿಗಳಿಗೆ ರೋಷ್ಟರ್ ಕಂ ಮೆರಿಟ್ ಅಳವಡಿಸಿ ರೋಷ್ಟರ್ ಸಂ.1 ರ ಅಭ್ಯರ್ಥಿಗಳ ಮೂಲ ದಾಖಲಾತಿಗಳನ್ನು ಪರಿಶೀಲಿಸಲಾಗಿದ್ದು, ಮೂಲ ದಾಖಲಾತಿಗಳ ಪರಿಶೀಲನೆಗೆ ಆಹ್ವಾನಿಸಿದ ಅಭ್ಯರ್ಥಿಗಳು ಹುದ್ದೆಗೆ ಬೇಕಾಗಿರುವ ವಿದ್ಯಾರ್ಹತೆಯನ್ನು ಹೊಂದದೇ ಇರುವ ಕಾರಣ ಉಳಿದ 1:18 ಅಭ್ಯರ್ಥಿಗಳ ಪಟ್ಟಿಯನ್ನು ತಯಾರಿಸಿ ಸದರಿ ಅಭ್ಯರ್ಥಿಗಳಿಗೆ ಮೇ 23ರ ಸಂಜೆ 4 ಗಂಟೆಯವರೆಗೆ ಕಚೇರಿ ಸಮಯದಲ್ಲಿ ಜಿಲ್ಲಾ ಸಮೀಕ್ಷಣಾ ಘಟಕ, ದಂಡಪ್ಪ ಮಾನ್ವಿ ಮಹಿಳಾ ಮತ್ತು ಮಕ್ಕಳ ಆಸ್ಪತ್ರೆ ಆವರಣ, ಕೆ.ಸಿ. ರಾಣಿ ರಸ್ತೆ ಗದಗ ಇಲ್ಲಿಗೆ ಮೂಲ ದಾಖಲಾತಿಗಳ ಪರಿಶೀಲನೆಗೆ ಆಹ್ವಾನಿಸಿದೆ.

ಸದರಿ ಮಾಹಿತಿಯನ್ನು ರಜಿಜಚಿರ.ಟುಛಿ.ಟಿ ವೆಬ್‌ಸೈಟ್ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿಯ ಸೂಚನಾ ಫಲಕದಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಿದೆ ಎಂದು ಪ್ರಕಟಣೆ ತಿಳಿಸಿದೆ.

ನರ್ಸಿಂಗ್ ವಿದ್ಯಾರ್ಥಿಗಳ ಪ್ರಮಾಣ ವಚನ ಸ್ವೀಕಾರ ಸಮಾರಂಭದಲ್ಲಿ ಯುವ ಮುಖಂಡ ಕೃಷ್ಣಗೌಡ ಹೆಚ್.ಪಾಟೀಲ

# ಸಮಾಜ ಅಭಿವೃದ್ಧಿಗೆ ಯುವಕರು ಕೈಜೋಡಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಸಮಾಜ ಅಭಿವೃದ್ಧಿ ಹೊಂದಬೇಕಾದರೆ ಯುವಕರು ಕೈಜೋಡಿಸಬೇಕು ಮತ್ತು ಇದರಲ್ಲಿ ಅವರ ಸಹಭಾಗಿತ್ವ ತುಂಬಾ ಮುಖ್ಯ ಎಂದು ಗದಗ ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಕೃಷ್ಣಗೌಡ ಹೆಚ್.ಪಾಟೀಲ ರವರು ಕರೆ ನೀಡಿದರು.

ನಗರದ ಶ್ರೀಮತಿ ಶಕುಂತಲಾ ಪಾಟೀಲ್ ಇನ್ಸ್ಟಿಟ್ಯೂಟ್ ಆಫ್ ನರ್ಸಿಂಗ್ ಸೈನ್ಸಸ್ ವತಿಯಿಂದ ಹಮ್ಮಿಕೊಂಡಿದ್ದ ಪ್ರಥಮ ವರ್ಷದ ಉಓಒ ನರ್ಸಿಂಗ್ ವಿದ್ಯಾರ್ಥಿಗಳ ಪ್ರಮಾಣ ವಚನ ಸ್ವೀಕಾರ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಬಡವರು ಕಷ್ಟವೆಂದು ಬಂದರೆ ನಿರ್ಲಕ್ಷ್ಯ ಮಾಡಬೇಡಿ. ಅಂಥವರು ಇದ್ದರೆ ನಮ್ಮ ಹಿರಿಯರ ಗಮನಕ್ಕೆ ತನ್ನಿ. ಕಷ್ಟದಲ್ಲಿ ಸಹಾಯ ಮಾಡಿದ ನರ್ಸಿಂಗ್ ವಿದ್ಯಾರ್ಥಿಗಳನ್ನು




ಬಡವರು ನೆನಪಿಟ್ಟುಕೊಳ್ಳುತ್ತಾರೆ ಎಂದು ತಿಳಿಸಿದರು.

ಗದಗ ನಗರದ ಎಲ್‌ವೈಡಿಎಂ ಸ್ಪರ್ಶ ಮಲ್ಟಿಸ್ಪೆಷಾಲಿಟಿ ಆಸ್ಪತ್ರೆಯ ತಜ್ಞ ವೈದ್ಯರಾದ ಡಾ. ಧನೇಶ ದೇಸಾಯಿ ಮಾತನಾಡಿ, ವಿದ್ಯಾರ್ಥಿಗಳು ಉತ್ತಮ ಅಂಕಗಳಿಸುವ ಮೂಲಕ ಸಂಸ್ಥೆಗೆ ಮತ್ತು ಪೋಷಕರಿಗೆ ಕೀರ್ತಿ ತರಬೇಕು. ವೈಯಕ್ತಿಕ ಹಿತಾಸಕ್ತಿಗಳನ್ನು ಬದಿಗೊತ್ತಿ ಮುಂದಿನ ಮೂರು ವರ್ಷ ಶಿಕ್ಷಣ ಪಡೆದವರಿಗೆ ದೇಶ ಮಾತ್ರವಲ್ಲದೆ ವಿದೇಶಗಳಲ್ಲಿಯೂ ಉತ್ತಮ ಅವಕಾಶಗಳಿವೆ. ನರ್ಸಿಂಗ್ ಶಿಕ್ಷಣ ಪಡೆದವರಿಗೆ ಸಾಕಷ್ಟು ಉದ್ಯೋಗಾವಕಾಶಗಳು ದೊರೆಯುತ್ತವೆ. ಈ ನಿಟ್ಟಿನಲ್ಲಿ ಸಮಾಜದಲ್ಲಿ ಗೌರವಯುತ ಬದುಕು ಕಟ್ಟಿಕೊಳ್ಳಬೇಕು ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ವಿದ್ಯಾದಾನ ಸಂಸ್ಥೆಯ ಕಾರ್ಯದರ್ಶಿ ಶ್ರೀನಿವಾಸ ಬಿ. ಹುಯಿಲಗೋಳ ಮಾತನಾಡಿ, ಈ ನರ್ಸಿಂಗ್ ಸಂಸ್ಥೆಯನ್ನು ಪ್ರಾರಂಭಿಸಲು ವಿಶ್ವನಾಥ ಪಾಟೀಲರು ಶ್ರಮವಹಿಸಿದ್ದಾರೆ. ಅನೇಕ ವ್ಯಕ್ತಿಗಳ ವಿರೋಧವಿದ್ದರೂ ಕೂಡಾ ಈ ಸಂಸ್ಥೆಯನ್ನು ಪ್ರತೀಕ ಹುಯಿಲಗೋಳರ ಸಹಯೋಗದಲ್ಲಿ ಪ್ರಾರಂಭಿಸಿದ್ದಾರೆ ಎಂದು ತಿಳಿಸಿದರು.

ಭಾರತೀಯ ಶಿಕ್ಷಣ ಸಂಸ್ಥೆಯ ಸಂಸ್ಥಾಪಕರು ಹಾಗೂ ಅಧ್ಯಕ್ಷರಾದ ಪ್ರೊ. ಎಸ್.ವೈ. ಚಿಕ್ಕಟ್ಟಿ ಮಾತನಾಡಿ, ನರ್ಸಿಂಗ್ ಹಾಗೂ ಅರೆ ವೈದ್ಯಕೀಯ ಕೋರ್ಸುಗಳಿಗೆ ಇಂದು ವಿಫುಲವಾದ ಅವಕಾಶಗಳಿವೆ ಎಂದು ತಿಳಿಸಿದರು.

ಡಾ. ವೀರೇಶ್ ಕೆ.ಹಂಚಿನಾಳ, ಬಾಗಲಕೋಟೆ ಆರ್ಯಭಟ ನರ್ಸಿಂಗ್ ಹಾಗೂ ಪ್ಯಾರಾ ಮೆಡಿಕಲ್ ಕಾಲೇಜಿನ ಚೇರಮನ್ ಪ್ರಶಾಂತ ಮಸೂದಿ ಮಾತನಾಡಿದರು.

ಶಿವನಗೌಡ ವಿ.ಎಂ ವಿದ್ಯಾರ್ಥಿಗಳಿಗೆ ಪ್ರತಿಜ್ಞಾವಿಧಿಯನ್ನು ಬೋಧಿಸಿದರು.

ಕಾರ್ಯಕ್ರಮದಲ್ಲಿ ಆರೋಗ್ಯಾಧಿಕಾರಿ ಡಾ. ಪವನ ಹುಯಿಲಗೋಳ, ಪ್ರಾಂಶುಪಾಲ ರಂಗನಾಥ ಎಂ.ವಿ, ಕಾರ್ಯದರ್ಶಿ ಭೀಮಸೇನ ಹುಯಿಲಗೋಳ ಉಪಸ್ಥಿತರಿದ್ದರು. ಕಾವ್ಯ ಬೀರನೂರು ಹಾಗೂ ಸುನೀಲ ಗುಡಗುಂಟಿ ಕಾರ್ಯಕ್ರಮವನ್ನು ನಿರೂಪಿಸಿದರು. ಸಂಸ್ಥೆಯ ಸಿಬ್ಬಂದಿ ವರ್ಗದವರು, ಸ್ಪರ್ಶ ಇನ್ಸ್ಟಿಟ್ಯೂಟ್ ಆಫ್ ನರ್ಸಿಂಗ್ ಸೈನ್ಸಸ್‌ನ ಎಲ್ಲಾ ಃಖಿಛಿ ನರ್ಸಿಂಗ್ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

ಗದಗ ಜಿಲ್ಲಾ ಆಸ್ಪತ್ರೆಯ ನರ್ಸಿಂಗ್ ಸೂಪರಿಂಟೆಂಡೆಂಟ್ ಡಾ. ರೇಖಾ ಸೋನಾವನೆ ಮಾತನಾಡಿ, ಮೆಡಿಕಲ್ ಕಾಲೇಜುಗಳಲ್ಲಿಯೂ ಸಹ ದಾದಿಯರ ಅವಶ್ಯಕತೆ ಇರುತ್ತದೆ. ವಿದ್ಯಾರ್ಥಿಗಳು ಪ್ರಾಯೋಗಿಕ ತರಬೇತಿಯನ್ನು ಚೆನ್ನಾಗಿ ಅಧ್ಯಯನ ಮಾಡಬೇಕು.

ಇದರಿಂದ ದಾದಿಯರ ಗುಣಮಟ್ಟ ಹೆಚ್ಚಾಗುತ್ತದೆ ಎಂದು ತಿಳಿಸಿದರು.

ಎಸ್‌ಎಸ್‌ಎಲ್‌ಸಿ ಪಠ್ಯ ವಿಷಯದ ಸಂಪೂರ್ಣತಾ ಉಚಿತ ಶಿಬಿರದಲ್ಲಿ ಶಾಸಕ ಡಾ. ಚಂದ್ರು ಲಮಾಣಿ ಪಾಠ

# ಶಿಕ್ಷಕರೂ ಆದ ಶಾಸಕರು!

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದಲ್ಲಿ ಡಾ. ಚಂದ್ರು ಲಮಾಣಿ ಅಭಿಮಾನಿ ಬಳಗದಿಂದ 2 ತಿಂಗಳುಗಳ ಕಾಲ ಲಕ್ಷ್ಮೇಶ್ವರ ಹಾಗೂ ಸುತ್ತಮುತ್ತಲಿನ ಗ್ರಾಮಗಳ 2026-26ನೇ ಸಾಲಿನ (ಕನ್ನಡ ಮಾಧ್ಯಮ) ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಪಠ್ಯ ವಿಷಯದ ಸಂಪೂರ್ಣತಾ ಉಚಿತ ಶಿಬಿರವು ಯಶಸ್ವಿಯಾಗಿ ಜರುಗುತ್ತಿದ್ದು, ಮಾಜಿ ಸಚಿವರು, ತಹಸೀಲ್ದಾರರು, ಪಿಎಸ್‌ಐ ಸೇರಿದಂತೆ ಗಣ್ಯರು, ಅಧಿಕಾರಿ ವರ್ಗದವರೂ ಈ ಶಿಬಿರದಲ್ಲಿ ಕೆಲ ಗಂಟೆಗಳ ಕಾಲ ಶಿಕ್ಷಕರಾಗಿ ಕಾರ್ಯನಿರ್ವಹಿದ್ದಾರೆ. ಅದರಂತೆ ಸೋಮವಾರ ಶಾಸಕ ಡಾ. ಚಂದ್ರು ಲಮಾಣಿ ಶಿಬಿರಕ್ಕೆ ಭೇಟಿ ನೀಡಿ ಕೆಲ ಕಾಲ ವಿದ್ಯಾರ್ಥಿಗಳಿಗೆ ಪಾಠ ಮಾಡಿ ಗಮನ ಸೆಳೆದರು.

ಮುಂಜಾನೆಯಿಂದಲೇ ಕೆಲಸದ ಒತ್ತಡ, ಕಾರ್ಯಕರ್ತರ ಭೇಟಿ, ಗ್ರಾಮೀಣ ಪ್ರದೇಶಗಳ ಭೇಟಿ ಇತ್ಯಾದಿ ಕಾರ್ಯಕ್ರಮಗಳ ನಡುವೆಯೂ ಶಾಸಕರು ವಿದ್ಯಾರ್ಥಿಗಳಿಗೆ ಮನದಟ್ಟಾಗುವಂತೆ, ನುರಿತ ಶಿಕ್ಷಕರಂತೆಯೇ ಪಾಠ ಮಾಡಿದ್ದು ವಿಶೇಷವಾಗಿತ್ತು. ಮಾನವನ ಶ್ವಾಸಕಾಂಗವ್ಯೂಹ ಎಂಬ ಪಾಠದ ಕುರಿತು ಬೋಧನೆ ಮಾಡಿದ ಅವರು, ಮಾನವನ ಶ್ವಾಸಕಾಂಗವ್ಯೂಹದಲ್ಲಿ ಬರುವ ಅಂಶಗಳು, ರಕ್ತ ನಾಳಗಳು, ಶುದ್ಧ ರಕ್ತ, ಅಶುದ್ಧ ರಕ್ತ, ಉಸಿರಾಟ ಕ್ರಿಯೆಗಳು ಇತ್ಯಾದಿ ವಿಷಯಗಳಿಗೆ ಸಂಬಂಧಿಸಿದಂತೆ ಪಾಠ ಮಾಡಿದರು.

ಈ ವೇಳೆ ಮಾತನಾಡಿದ ಅವರು, ವಿದ್ಯಾರ್ಥಿಗಳಿಗೆ ಅಭ್ಯಾಸ ಹೇಗೆ ಮಾಡಬೇಕು, ಅವರು ಕೇಳುವ ಪ್ರಶ್ನೆಗಳಿಗೆ ಹೇಗೆ ಉತ್ತರಿಸಬೇಕು ಎಂಬ ವಿಚಾರವಾಗಿ ಸವಿಸ್ತಾರವಾಗಿ ತಿಳಿಸಿಕೊಟ್ಟರು. ಈ ವೇಳೆ ಮಕ್ಕಳು ಕೇಳಿದ ಪ್ರಶ್ನೆಗಳಿಗೆ ಉತ್ತರಿಸಿದ ಶಾಸಕರು, ಪಾಠದ ವಿಷಯಗಳನ್ನು ಹೇಗೆ ಮನದಟ್ಟು ಮಾಡಿಕೊಳ್ಳಬೇಕು, ಕಠಿಣ ಪರಿಶ್ರಮದಿಂದ ನಡೆಸಿದ ಸತತ ಅಭ್ಯಾಸದಿಂದ ದೊರಕುವ ಲಾಭಗಳ ಕುರಿತು ವಿವರಿಸಿದರು. ಶಿಕ್ಷಣ ಎನ್ನುವದು ಬಹುದೊಡ್ಡ ಶಕ್ತಿ. ವಿದ್ಯಾರ್ಥಿಗಳು ಗುರುಗಳು ಹೇಳಿದ ಅಂದಿನ ಪಾಠವನ್ನು ಅಂದೇ ಅಭ್ಯಾಸ ಮಾಡಬೇಕು ಎಂದು ಕಿವಿಮಾತು ಹೇಳಿದರು.

ಈ ಸಂದರ್ಭದಲ್ಲಿ ಶಾಸಕ ಡಾ. ಚಂದ್ರು ಲಮಾಣಿ ಅಭಿಮಾನಿ ಬಳಗದ ಅಧ್ಯಕ್ಷ ನವೀನ ಬೆಳ್ಳಟ್ಟಿ, ಬಸವರಾಜ ಚಕ್ರಸಾಲಿ, ವಿಜಯ ಮೆಕ್ಕಿ, ಶಿಕ್ಷಕರಾದ ಕೆ.ಆರ್. ಲಮಾಣಿ, ಸಂಪನ್ಮೂಲ ವ್ಯಕ್ತಿಗಳು ಉಪಸ್ಥಿತರಿದ್ದರು.



ವಿದ್ಯಾರ್ಥಿಗಳಿಗೆ ಸಮಯಪ್ರಜ್ಞೆ ಹೆಚ್ಚು ಅವಶ್ಯವಾಗಿದ್ದು, ಅದರ ಪ್ರಕಾರ ಜೀವನ ನಡೆಸಬೇಕು. ಇಂದಿನ ದಿನಗಳಲ್ಲಿ ಬಹಳ ಸುಲಭವಾಗಿ ಶಿಕ್ಷಣ ದೊರೆಯುತ್ತಿದೆ. ಇದನ್ನು ಸದುಪಯೋಗಪಡಿಸಿಕೊಂಡು ಸಾಧನೆಯ ಕಡೆ ಹೆಜ್ಜೆ ಹಾಕಬೇಕು. ಕಳೆದ ಐದು ವರ್ಷಗಳಿಂದ ಡಾ. ಚಂದ್ರು ಲಮಾಣಿ ಅಭಿಮಾನಿಗಳ ಬಳಗ ಈ ಉಚಿತ ಶಿಕ್ಷಣ ನೀಡುತ್ತಿದ್ದು, ಬಳಗದ ಸೇವೆ ಶ್ಲಾಘನೀಯ. ಮುಂದಿನ ದಿನಗಳಲ್ಲಿ ಇದನ್ನು ಇನ್ನೂ ಹೆಚ್ಚಿನ ಮಟ್ಟಕ್ಕೆ ವಿಸ್ತರಿಸುವ ಯೋಚನೆ ಹೊಂದಲಾಗಿದೆ. ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಡಾ. ಚಂದ್ರು ಲಮಾಣಿ ವಿದ್ಯಾರ್ಥಿಗಳಿಗೆ ಕರೆ ನೀಡಿದರು.

# ಕಾರ್ಖಾನೆಗಳ ವಿರುದ್ಧ 'ಪೇಂಟ್ ಅಭಿಯಾನ'

■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ನಗರಕ್ಕೆ ಹೊಂದಿಕೊಂಡು ಸ್ಥಾಪನೆಗೆ ಸಿದ್ಧವಾದ ಎಂಎಸ್‌ಪಿಎಲ್ ಅಥವಾ ಬಿಎಸ್‌ಪಿಎಲ್ ಹಾಗೂ ಕಿರ್ಲೋಸ್ಕರ್, ಕಲ್ಯಾಣ ಸೇರಿ ಇತರೆ ಕಾರ್ಖಾನೆಗಳ ಆರಂಭ, ವಿಸ್ತರಣೆ ವಿರೋಧಿಸಿ ನಡೆಯುತ್ತಿರುವ ಜನಾಂದೋಲನಕ್ಕೆ ಮತ್ತೊಂದು ರೀತಿಯ ಹೋರಾಟ ಸೇರ್ಪಡೆಯಾಗಿದ್ದು, ಕೊಪ್ಪಳ ಜಿಲ್ಲಾ ಬಚಾವೋ ಆಂದೋಲನದ ವತಿಯಿಂದ 'ಪೇಂಟ್ ಅಭಿಯಾನ'ವನ್ನು ಆರಂಭಿಸಲಾಗಿದೆ.

ಕೊಪ್ಪಳದ ವಿವಿಧೆಡೆ ಮತ್ತು ಬಾಧಿತ ಪ್ರದೇಶಗಳ ಹಳ್ಳಿಗಳಲ್ಲಿ ಕಾರ್ಖಾನೆ ವಿರುದ್ಧ ಮತ್ತು ಅದರಿಂದ ಆಗುತ್ತಿರುವ ಹಾನಿಯ ಬಗ್ಗೆ ಜನಜಾಗೃತಿ ಗೋಡೆ ಬರಹಗಳನ್ನು ಬರೆಯುವ ಉದ್ದೇಶ ಈ ಪೇಂಟ್ ಅಭಿಯಾನ ಹೊಂದಿದ್ದು, ಈ ಅಭಿಯಾನವನ್ನು ಜನಾಂದೋಲನವಾಗಿ ಸಹಕಾರದ ತತ್ವದಲ್ಲಿ ಮಾಡುವ ಉದ್ದೇಶದಿಂದ ಗೋಡೆ ಬರಹಕ್ಕೆ ಅಗತ್ಯ ಇರುವ ಬಣ್ಣಗಳನ್ನು ಕೊಪ್ಪಳ ಭಾಗ್ಯನಗರದ



ವಿವಿಧ ಬಣ್ಣದ ವ್ಯಾಪಾರಿಗಳಿಂದ ದೇಣಿಗೆ ರೂಪದಲ್ಲಿ ಪಡೆದು ಗೋಡೆ ಬರಹಗಳನ್ನು ಬರೆಯಲು ಸಮಿತಿ ನಿರ್ಧರಿಸಿ ಚಾಲನೆ ನೀಡಲಾಗಿದೆ.

ಮೊದಲು ನಗರದ ಕುಷ್ಟಗಿ ರಸ್ತೆಯಲ್ಲಿರುವ ಕಿರಣ್ ಪೇಂಟ್ಸ್‌ನ ಮಾಲೀಕರಾದ ಗವಿಸಿದ್ದಪ್ಪ ಚಿನ್ನೂರ್ ಮತ್ತು ಹುಲಿಗಮ್ಮ ದೇವಿ ಪೇಂಟ್ಸ್‌ನ ಮಾರುತಿ ದೇಣಿಗೆ ನೀಡಿದರು. ಈ ಅಭಿಯಾನದಲ್ಲಿ ಗೋಡೆ ಬರಹ ಬರೆಯಲು ಹಿರಿಯ ಚಿತ್ರ ಕಲಾವಿದರಾದ ರಾಜು ತೇರದಾಳ್ ಮತ್ತು ಕೃಷ್ಣ ಚಿತ್ರಗಾರವರು ಒಪ್ಪಿಕೊಂಡಿದ್ದು, ಇನ್ನೂ ಅನೇಕ ಬಣ್ಣದ ಅಂಗಡಿ ಮಾಲೀಕರು ಮತ್ತು ಚಿತ್ರ ಕಲಾವಿದರು ಸಹಕಾರ ನೀಡುವ ನಿರೀಕ್ಷೆಯಿದೆ. ಕೊಪ್ಪಳದಿಂದ ಕಾರ್ಖಾನೆಗಳನ್ನು ಓಡಿಸುವ ನಿಟ್ಟಿನಲ್ಲಿ ಆಂದೋಲನವನ್ನು ತೀವ್ರಗೊಳಿಸಲು ಜನರು ಅಳುಕದೆ ಸಹಕಾರ ನೀಡಲು ಕೋರಿದರು.

ಈ ಸಂದರ್ಭದಲ್ಲಿ ಕೊಪ್ಪಳ ಜಿಲ್ಲಾ ಬಚಾವೋ ಆಂದೋಲನದ ಪ್ರೊ. ಅಲ್ಲಮಪ್ರಭು ಬೆಟ್ಟದೂರ್, ಬಸವರಾಜ ಶೀಲವಂತರ್, ಮಹಾಂತೇಶ್ ಕೊತಬಾಳ, ಮಂಜುನಾಥ ಜಿ.ಗೊಂಡಬಾಳ, ಶರಣು ಗಡ್ಡಿ ಇತರರು ಇದ್ದರು.

# ವಿದ್ಯಾರ್ಥಿಗಳಿಂದ ಆನ್ಲೈನ್ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿನ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ಪಿ.ಯು.ಸಿ, ಐ.ಟಿ.ಐ ಮತ್ತು ಡಿಪ್ಲೋಮಾ ಪಿ.ಯು. ಸಮಾನಾಂತರ ಕೋರ್ಸಿನ ವಿದ್ಯಾರ್ಥಿಗಳಿಗೆ, ವಿದ್ಯಾರ್ಥಿನಿಲಯಗಳಿಗೆ ಹೊಸದಾಗಿ ಪ್ರವೇಶ ಬಯಸುವ ವಿದ್ಯಾರ್ಥಿಗಳಿಗೆ ಆನೆ ಲೈನ್ ಅರ್ಜಿ ಪ್ರಾರಂಭ ವಾಗಿದೆ.

ಅರ್ಜಿ ಸಲ್ಲಿಸಲು ಜೂನ್ 20 ಕೊನೆಯ ದಿನಾಂಕವಾಗಿದ್ದು, ಗದಗ ತಾಲೂಕಿನ ಮೆಟ್ರಿಕ್ ನಂತರದ ಪಿ.ಯು.ಸಿ, ಐ.ಟಿ.ಐ ಮತ್ತು ಡಿಪ್ಲೋಮಾ ಪಿ.ಯು. ಸಮಾನಾಂತರ ಕೋರ್ಸಿನ ವಿದ್ಯಾರ್ಥಿಗಳಿಗೆ ಬಾಲಕ ಹಾಗೂ ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶಕ್ಕಾಗಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ-1, 2ಎ, 2ಬಿ, 3ಎ, 3ಬಿ, ಪ.ಜಾ/ಪ.ವರ್ಗ ಮತ್ತು ಇತರೆ ಜನಾಂಗಗಳಿಗೆ ಸೇರಿದ ಗದಗ ವಿದ್ಯಾರ್ಥಿಗಳಿಂದ 2025-26ನೇ ಸಾಲಿಗೆ ಆನ್ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ.

ವಿದ್ಯಾರ್ಥಿಯ ಪೋಷಕರ ವಾರ್ಷಿಕ ಆದಾಯ ಮಿತಿ ಪ್ರವರ್ಗ-1, ಎಸ್.ಸಿ & ಎಸ್.ಟಿ ರೂ. 2.50 ಲಕ್ಷ, ಹಾಗೂ ಪ್ರವರ್ಗ-2ಎ, 2ಬಿ, 3ಎ, 3ಬಿ, ಇತರೆ ಹಿಂದುಳಿದ ವರ್ಗ ಹಾಗೂ ಇತರೆ ರೂ. 1.00 ಲಕ್ಷ, ವಿದ್ಯಾರ್ಥಿಗಳು https://shp.karnataka.gov.in/bcwd ಅನ್ನು ಸಂಪರ್ಕಿಸಿ ಆನ್ಲೈನ್ ನಲ್ಲಿ ಅರ್ಜಿ ಸಲ್ಲಿಸಬೇಕು.

ತಾಲೂಕುವಾರು ವಿದ್ಯಾರ್ಥಿನಿಲಯಗಳ ವಿವರ ಹಾಗೂ ವಿದ್ಯಾರ್ಥಿನಿಲಯದ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರದ ಆದೇಶಕ್ಕಾಗಿ ಇಲಾಖೆಯ ವೆಬ್ಸೈಟ್ https://bcwd.karnataka.govಟಿ ನ್ನು ನೋಡಬಹುದು. ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ bc-wdhelpline@gmail.com

ಇ-ಮೇಲ್ ಮುಖಾಂತರ ಅಥವಾ ಜಿಲ್ಲಾ, ತಾಲೂಕು, ಅಧಿಕಾರಿಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರನ್ನು ಅಗತ್ಯ ದಾಖಲೆಗಳೊಂದಿಗೆ ಸಂಪರ್ಕಿಸುವುದು.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 8050770004, 8050770005 ಸಂಪರ್ಕಿಸಬಹುದು ಎಂದು ತಾಲೂಕ ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿ ಡಾ ಬಸವರಾಜ್ ವೆಂ. ಬಳ್ಳಾರಿ ತಿಳಿಸಿದ್ದಾರೆ.

ರಿಯಾಯಿತಿ ದರದ ಬಿತ್ತನೆ ಬೀಜ ವಿತರಣೆಗೆ ಚಾಲನೆ ನೀಡಿದ ಶಾಸಕ ಡಾ. ಚಂದ್ರು ಲಮಾಣಿ

# ಪ್ರಮಾಣೀಕೃತ ಬೀಜಗಳನ್ನೇ ಬಿತ್ತನೆ ಮಾಡಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ರೈತರಿಗೆ ಸಕಾಲದಲ್ಲಿ ಬಿತ್ತನೆ ಬೀಜ, ರಸಗೊಬ್ಬರ ಲಭಿಸುವ ಅಗತ್ಯ ಕ್ರಮಗಳನ್ನು ಕೃಷಿ ಇಲಾಖೆಯ ಅಧಿಕಾರಿಗಳು ಕೈಗೊಳ್ಳಬೇಕು ಮತ್ತು ರೈತರು ಪ್ರಮಾಣೀಕೃತ ಬೀಜಗಳನ್ನೇ ಬಿತ್ತನೆ ಮಾಡಬೇಕು ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಅವರು ಮಂಗಳವಾರ ಪಟ್ಟಣದ ರೈತ ಸಂಪರ್ಕ ಕೇಂದ್ರದಲ್ಲಿ ರಿಯಾಯಿತಿ ದರದ ಬಿತ್ತನೆ ಬೀಜ ವಿತರಣೆಗೆ ಚಾಲನೆ ನೀಡಿ ಮಾತನಾಡಿ, ಸರ್ಕಾರ ರಿಯಾಯಿತಿ ದರದಲ್ಲಿ ಬಿತ್ತನೆ ಬೀಜ, ಕೃಷಿ ಪೂರಕ ಸಲಕರಣೆಗಳು, ಗೊಬ್ಬರ, ಕ್ರಿಮಿನಾಶ ಪೂರೈಸುತ್ತಿದ್ದು, ರೈತರು ಸೂಕ್ತ ದಾಖಲೆ ನೀಡಿ ಇದರ ಸದುಪಯೋಗ ಪಡೆದುಕೊಳ್ಳಬೇಕು. ಮುಕ್ತ ಮಾರುಕಟ್ಟೆಯಲ್ಲಿ ಅನಧಿಕೃತ ಮಾರಾಟಗಾರರಿಂದ ಪ್ರಮಾಣೀಕೃತವಲ್ಲದ, ಕಳಪೆ ಬೀಜವನ್ನು ರೈತರು ಖರೀದಿಸಬಾರದು ಮತ್ತು ಈ ನಿಟ್ಟಿನಲ್ಲಿ ಅಧಿಕಾರಿಗಳು ನಿಗಾವಹಿಸಬೇಕು. ರಿಯಾಯಿತಿ ದರದ ಬೀಜಗಳು ಅರ್ಹ ರೈತರಿಗೆ ಸಿಗಬೇಕು ಎಂದರು.

ಇತ್ತೀಚಿನ ದಿನಗಳಲ್ಲಿ ಕೃಷಿ ಇಲಾಖೆಯಲ್ಲಿ ಕೆಲವರು ಹಸಿರು ವಸ್ತ್ರ ಧರಿಸಿ ತಾವೂ ರೈತರೆಂದು ಸುಳ್ಳು ಹೇಳಿಕೊಳ್ಳುತ್ತಿದ್ದಾರಲ್ಲದೆ, ಅಧಿಕಾರಿಗಳಿಗೆ ದಬ್ಬಾಳಿಕೆ ಮಾಡಿ ಖೊಟ್ಟಿ ದಾಖಲೆ ಸೃಷ್ಟಿಸಿ ಇಲಾಖೆಯ ಸವಲತ್ತುಗಳನ್ನು ಪಡೆದುಕೊಳ್ಳುತ್ತಿದ್ದಾರೆ. ಗ್ರಾಫಿಕ್ಸ್ ಫೋಟೋ ಮಾಡಿ ಇಲಾಖೆಯ ಯೋಜನೆ ಮತ್ತು ವಿಮಾ ಸೌಲಭ್ಯ ದುರುಪಯೋಗಪಡಿಸಿಕೊಳ್ಳುತ್ತಿದ್ದಾರೆ. ಈ ನಿಟ್ಟಿನಲ್ಲಿ ಅಧಿಕಾರಿಗಳ ತಂಡ ರಚಿಸಿ ವಿಮಾ ವ್ಯವಸ್ಥೆಯಲ್ಲಾಗುತ್ತಿರುವ ಗೋಲ್ಮಾಲ್ ತಡೆಗಟ್ಟಲಾಗುವುದು. ಅಧಿಕಾರಿಗಳನ್ನು ಹೆದರಿಸುವುದು, ದಬ್ಬಾಳಿಕೆ, ದಲ್ಲಾಳಿ ಕೆಲಸ ಮಾಡುವವರನ್ನು ಗುರುತಿಸಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಬೇಕು ಎಂದರು.

ಕೃಷಿಕ ಸಮಾಜದ ಜಿಲ್ಲಾಧ್ಯಕ್ಷ ವಿರೇಂದ್ರಗೌಡ ಪಾಟೀಲ, ಸದಸ್ಯರಾದ ರಾಜೀವ ಕುಂಬಿ, ನಿಂಗಪ್ಪ ಬನ್ನಿ, ಶಿವಣ್ಣ ಮಾನ್ವಿ, ಬಸಣ್ಣ ಹಂಜಿ, ರಮೇಶ ಉಪನಾಳ, ಅಶೋಕ ನೀರಾಲೋಟಿ, ಬಸವರೆಡ್ಡಿ ಹನಮರೆಡ್ಡಿ, ರಾಜು ಬೆಂಚಳ್ಳಿ, ಬಸವರಾಜ ಚಕ್ರಸಾಲಿ, ಶಮಕರ ಬ್ಯಾಡಗಿ, ಗಂಗಾಧರ ಗೋಡಿ, ಪ್ರವೀಣ ಗಾಣಿಗೇರ ಸೇರಿದಂತೆ ಕೃಷಿ ಅಧಿಕಾರಿ ಚಂದ್ರಶೇಖರ ನರಸಮ್ಮನವರ, ಈರಣ್ಣ ಅಕ್ಕೂರ, ಪಿ.ಕೆ. ಹೊನ್ನಪ್ಪನವರ, ರೈತ ಅನುವುಗಾರರಾದ ಅಮಿತ ಹಾಲೇವಾಡಿಮಠ, ಮಹೇಶ ನಂದೆಣ್ಣವರ, ಸಿದ್ದು ಕನವಳ್ಳಿ ಇದ್ದರು.




ಸಹಾಯಕ ಕೃಷಿ ನಿರ್ದೇಶಕ ರೇವಣಪ್ಪ ಮನಗೂಳಿ ಮಾಹಿತಿ ನೀಡಿ, ಲಕ್ಷ್ಮೇಶ್ವರ ರೈತ ಸಂಪರ್ಕ ಕೇಂದ್ರದಲ್ಲಿ 50 ಕ್ವಿಂಟಲ್ ಹೆಸರು, 40 ಕ್ವಿಂಟಲ್ ತೊಗರಿ ಬೀಜ ದಾಸ್ತಾನಿದೆ. ಈ ವಾರದಲ್ಲಿ ಗೋವಿನಜೋಳ ಸೇರಿ ಇತರೇ ಬೀಜಗಳು ಬರುತ್ತವೆ. ಜೂನ್ ಮೊದಲ ವಾರದಲ್ಲಿ ಹೆಸರು ಬಿತ್ತನೆ ಮಾಡಬಹುದಾಗಿದ್ದು, ಬಿತ್ತನೆ ಪೂರ್ವ ಬೀಜೋಪಚಾರ ಮಾಡಬೇಕು. ರೈತರ ಬೇಡಿಕೆಗೆ ತಕ್ಕಂತೆ ಬೀಜ, ಗೊಬ್ಬರಗಳನ್ನು ಪೂರೈಸಲಾಗುವುದು ಎಂದರು

# ತಾಂತ್ರಿಕ ವೃತ್ತಿ ತರಬೇತಿ ಪ್ರಾರಂಭ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಸರ್ಕಾರದ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರದಲ್ಲಿ ಹತ್ತನೇ ತರಗತಿ ಉತ್ತೀರ್ಣ ಮತ್ತು ಅನುತ್ತೀರ್ಣರಾದ ಯುವಕರಿಗೆ? ಟೂಲ್‌ರೂಮ್ ಮಶಿನಿಸ್ಟ್ ತಾಂತ್ರಿಕ ವೃತ್ತಿ ತರಬೇತಿಗೆ ಪ್ರವೇಶಾತಿ ಪ್ರಾರಂಭವಾಗಿದೆ.

ಈ ತರಬೇತಿ ಹೊಂದಿದ ಅಭ್ಯರ್ಥಿಗಳಿಗೆ ಕೈಗಾರಿಕೆಗಳಲ್ಲಿ ಹೆಚ್ಚಿನ ಬೇಡಿಕೆಯಿರುತ್ತದೆ. ಒಂದೇ ಕೋರ್ಸಿನಲ್ಲಿ ಟರ್ನರ್, ಮಿಲ್ಲರ್, ಗ್ರೈಂಡರ್, ಸಿಎನ್‌ಸಿ, ಕ್ಯಾಡ್-ಕ್ಯಾಮ್ ಮತ್ತು ಟೂಲ್ ಆಂಡ್ ಡೈ ಮೇಕಿಂಗ್ ಟ್ರೇಡ್‌ಗಳಲ್ಲಿ ಆನ್ ದಿ ಜಾಬ್ ತರಬೇತಿ ನೀಡುವುದರಿಂದ ವಿದ್ಯಾರ್ಥಿಗಳಿಗೆ ಹೆಚ್ಚು ಉದ್ಯೋಗಾವಕಾಶಗಳು ದೊರಕುತ್ತವೆ. ಜೊತೆಗೆ ಅಟೋಕ್ಯಾಡ್, ಕನ್ನಡ ಮತ್ತು ಇಂಗ್ಲಿಷ್ ಭಾಷಾ ಕೌಶಲ್ಯ ಹಾಗೂ ಉದ್ಯೋಗ ಕೌಶಲ್ಯಗಳನ್ನು ಕಲಿಸಲಾಗುತ್ತದೆ.

ಜಿಟಿಟಿಸಿ ಸಂಸ್ಥೆಯು ಉನ್ನತ ತಂತ್ರಜ್ಞಾನ ಮತ್ತು ತರಬೇತಿ ಸೌಲಭ್ಯಗಳನ್ನು ಅಳವಡಿಸಿಕೊಂಡಿದ್ದು, ಕೈಗಾರಿಕೆಗಳಲ್ಲಿ ಅನುಭವ ಹೊಂದಿದ ಶಿಕ್ಷಕರನ್ನು ಹೊಂದಿದೆ. ತರಬೇತಿಯ ನಂತರ ವಿದ್ಯಾರ್ಥಿಗಳಿಗೆ ಟೂಲಿಂಗ್, ವಿಮಾನ ತಯಾರಿಕೆ, ಮತ್ತು ಅಟೋಮೊಬೈಲ್ ವಲಯಗಳ ಪ್ರತಿಷ್ಠಿತ ಕೈಗಾರಿಕೆಗಳಲ್ಲಿ ಉದ್ಯೋಗ ದೊರಕಿಸಿ ಕೊಡಲಾಗುವುದು. ಕಳೆದ ವರ್ಷ ಜಿಟಿಟಿಸಿಯಲ್ಲಿ ತರಬೇತಿ ಪಡೆದ ಎಲ್ಲ ಅಭ್ಯರ್ಥಿಗಳು ಕ್ಯಾಂಪಸ್ ಸಂದರ್ಶನದ ಮೂಲಕ ಏರೋಸ್ಪೇಸ್ ಉತ್ಪಾದನೆ ಮತ್ತು ಟೂಲ್ ರೂಮ್ ಕೈಗಾರಿಕೆಗಳಲ್ಲಿ ನೇಮಕಾತಿ ಹೊಂದಿರುತ್ತಾರೆ.

ಆಸಕ್ತ ಅಭ್ಯರ್ಥಿಗಳು ಮೇ 30 ರೊಳಗಾಗಿ ಅರ್ಜಿ ಸಲ್ಲಿಸಬೇಕು. ತರಬೇತಿಗಳು ಜೂನ್ 2 ರಿಂದ ಪ್ರಾರಂಭವಾಗಲಿವೆ. ಆಸಕ್ತ ಅಭ್ಯರ್ಥಿಗಳು ಹುಬ್ಬಳ್ಳಿ ಮತ್ತು ನರಗುಂದ ಕೇಂದ್ರಗಳಿಗೆ ಭೇಟಿ ನೀಡಿ ಪ್ರವೇಶ ಪಡೆಯಬಹುದು. ಹೆಚ್ಚಿನ ಮಾಹಿತಿಗೆ ಜಿಟಿಟಿಸಿ, ಗೋಕುಲ ರಸ್ತೆ, ಹುಬ್ಬಳ್ಳಿ. ದೂರವಾಣಿ 8183860552, 9902101010 ಮತ್ತು ಜಿಟಿಟಿಸಿ, ಅಳಗವಾಡಿ ರಸ್ತೆ, ನರಗುಂದ. ದೂರವಾಣಿ 8088536896 ಸಂಪರ್ಕಿಸಲು ಕೋರಲಾಗಿದೆ. ಮಾರುತಿ ಭಜಂತ್ರಿ ಪ್ರಾಂಶುಪಾಲರು ಜಿಟಿಟಿಸಿ, ಹುಬ್ಬಳ್ಳಿಮತ್ತು ನರಗುಂದ ಮೊ: 9902101010

# ಕಳ್ಳತನ ಮಾಡಿ 20 ಮಕ್ಕಳ ಶಾಲಾ, ಕಾಲೇಜು ಫೀಸ್ ಕಟ್ಟಿದ್ದ ಕಳ್ಳ ಅರೆಸ್ಟ್!

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ನಗರದ ಬ್ಯಾಡರಹಳ್ಳಿ ಪೊಲೀಸರು ಕಾರ್ಯಾಚರಣೆ ನಡೆಸಿ ಕಳ್ಳತನ ಮಾಡಿ 20 ಮಕ್ಕಳ ಶಾಲಾ, ಕಾಲೇಜು ಫೀಸ್ ಕಟ್ಟಿದ್ದ ಕಳ್ಳನು ಸೇರಿ ಮೂವರು ಖತರ್ನಾಕ್ ಮನೆಗಳ್ಳರನ್ನು ಅರೆಸ್ಟ್ ಮಾಡುವಲ್ಲಿ ಯಶಸ್ವಿಯಾಗಿದ್ದಾರೆ.

ಶಿವು, ಅನಿಲ್ ಹಾಗು ವಿವೇಕ್ ಬಂಧಿತರು. ಈ ಕಳ್ಳತನದ ಮಾಸ್ಟರ್ ಮೈಂಡ್ ಮಾತ್ರ ಬೇಗೂರು ನಿವಾಸಿ ಶಿವು @ ಶಿವರಪ್ಪನ್. ಈತನ ಸ್ಟೋರಿ ಕೇಳಿದ್ರೆ ನೀವೇ ಗಾಬರಿಯಾಗ್ತೀರಿ.

ಎಸ್, ಮಕ್ಕಳಿಲ್ಲದ ಶಿವು ಆತ್ಮಹತ್ಯೆ ಮಾಡಿಕೊಳ್ಳಲು ಯೋಚಿಸುತ್ತಿದ್ದಾಗ ತನ್ನ ಏರಿಯಾದಲ್ಲಿನ ಸ್ನೇಹಿತರು ಮಕ್ಕಳ ಸ್ಕೂಲ್ ಫೀಸ್ ಕಟ್ಟಲು ಪರದಾಡುತ್ತಿರುವುದನ್ನು ನೋಡಿದ್ದ. ಬಳಿಕ ಶಿವು ಬ್ಯಾಡರಹಳ್ಳಿ ಸೇರಿದಂತೆ ಹಲವೆಡೆ ಮನೆಗಳಿಗೆ ಕನ್ನ ಹಾಕಿದ್ದು, ಕದ್ದ ಚಿನ್ನಾಭರಣವನ್ನು ಸ್ನೇಹಿತರಾದ ಅನಿಲ್ @ ಜಗ್ಗ ಮತ್ತು ವಿವೇಕ್‌ನ ಸಹಾಯದಿಂದ ಮಾರಾಟ ಮಾಡಿದ್ದಾನೆ. ತಮಿಳುನಾಡಿನಲ್ಲಿ 22 ಲಕ್ಷಕ್ಕೆ ಚಿನ್ನ ಮಾರಾಟ ಮಾಡಿಸಿದ್ದ ಶಿವು ಬಂದ ಹಣದಲ್ಲಿ ವಿವೇಕ್‌ಗೆ 4 ಲಕ್ಷ, ಅನಿಲ್‌ಗೆ 4 ಲಕ್ಷ ರೂ. ಮೌಲ್ಯದ ಆಟೋ ಕೊಡಿಸಿದ್ದ. ಉಳಿದ 14 ಲಕ್ಷ ರೂ. ಹಣದಲ್ಲಿ ಏರಿಯಾದ 20 ಮಕ್ಕಳಿಗೆ ಶಾಲಾ ಹಾಗೂ ಕಾಲೇಜ್ ಫೀಸ್ ಕಟ್ಟಿದ್ದಾನೆ. ಮನೆಗಳ್ಳರ

# ಸಿಡಿಲು ಬಡಿದು ವೃದ್ಧ- ಎಮ್ಮೆ ದುರ್ಮರಣ!

■ವಿಜಯಸಾಕ್ಷಿ ಸುದ್ದಿ, ವಿಜಯಪುರ

ಕರ್ನಾಟಕದಲ್ಲಿ ಮಳೆಯ ಅಬ್ಬರ ಜೋರಾಗಿದ್ದು, ಸಾಕಷ್ಟು ಅವಾಂತರಗಳು ಸೃಷ್ಟಿ ಆಗಿದೆ.

ಅದರಂತೆ ಜಿಲ್ಲೆಯ ಮುದ್ದೇಬಿಹಾಳ ತಾಲೂಕಿನ ಕೊಳೂರ ಗ್ರಾಮದಲ್ಲಿ ಸಿಡಿಲು ಬಡಿದು ವೃದ್ಧ ಹಾಗೂ ಎಮ್ಮೆ ಸಾವನ್ನಪ್ಪಿರುವ ಘಟನೆ ಜರುಗಿದೆ.

ಬಸನಗೌಡ ಬಿರಾದಾರ್ ಸ್ಥಳದಲ್ಲೇ ಸಾವನ್ನಪ್ಪಿದ ವೃದ್ಧ. ತೋಟದ ಮನೆಯ ಗಿಡಗ ಕೆಳಗೆ ನಿಂತಿದ್ದ ವೇಳೆ ಈ ದುರ್ಘಟನೆ ಜರುಗಿದೆ. ಮುದ್ದೇಬಿಹಾಳ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ಜರುಗಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka